ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೭

# ಪಟ್ಟಿ – ೧೩

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೈದನೇ ಅಧಿವೇಶನ

ಶುಕ್ರವಾರ, ದಿನಾಂಕ : ೨೧ನೇ ಮಾರ್ಚ್, ೨೦೨೫

---

## ಸಮೂಹ – V

೧. ಸಮಾಜ ಕಲ್ಯಾಣ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

೩. ಕೃಷಿ ಸಚಿವರು

೪. ಕಾರ್ಮಿಕ ಸಚಿವರು

೫. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೬. ಯೋಜನೆ ಮತ್ತು ಸಾಂಖ್ಯಿಕ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

---

## ೨೦೨೪–೨೫ನೇ ಸಾಲಿನಲ್ಲಿ ಮಂಜೂರಾಗಿರುವ ಬಿಡುಗಡೆಯಾಗಿರುವ ಮತ್ತು ಖರ್ಚಾಗಿರುವ ಅನುದಾನದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೮ (೧೫೮೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ನಿಗಮಗಳೆಷ್ಟು ; ಅವು ಯಾವುವು ; ೨೦೨೪–೨೫ನೇ ಸಾಲಿನಲ್ಲಿ ನಿಗಮಗಳಿಗೆ ಮಂಜೂರಾದ ಅನುದಾನ ಎಷ್ಟು ಮತ್ತು ಇದುವರೆಗೂ ಎಷ್ಟು ಅನುದಾನದ ಕಂತುಗಳು ಬಿಡುಗಡೆಯಾಗಿವೆ ; (ನಿಗಮವಾರು ಮಾಹಿತಿ ನೀಡುವುದು)

(ಆ) ೨೦೨೪–೨೫ನೇ ಸಾಲಿನಲ್ಲಿ ಇದುವರೆಗೂ ಬಿಡುಗಡೆಯಾಗಿರುವ ಅನುದಾನದಲ್ಲಿ ಆಯ್ಕೆಯಾದ ಎಷ್ಟು ಅರ್ಜಿದಾರರಿಗೆ ಸಾಲ–ಸಹಾಯಧನವನ್ನು ನೀಡಲಾಗಿದೆ ಹಾಗೂ ವೆಚ್ಚದ ವಿವರಗಳೇನು ; ೨೦೨೪–೨೫ನೇ ಸಾಲಿನಲ್ಲಿ ಆಯ್ಕೆಯಾದ ಫಲಾನುಭವಿಗಳ ಪೈಕಿ ಯೋಜನವಾರು ಖರ್ಚು ಮಾಡಿದ ಮೊತ್ತವೆಷ್ಟು ; (ಮಾಹಿತಿ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳೆಷ್ಟು ಹಾಗೂ ಈ ಫಲಾನುಭವಿಗಳಿಗೆ ವೆಚ್ಚ ಮಾಡಿದ ಮೊತ್ತ ವೆಷ್ಟು ; ೨೦೨೩–೨೪ ಮತ್ತು ೨೦೨೪–೨೫ನೇ ಸಾಲುಗಳಿಗೆ ಸಂಬಂಧಿಸಿದಂತೆ ಎಷ್ಟು ಬೋರ್ ವೆಲ್ ಕೊರಸಲಾಗಿದೆ ? (ಜಿಲ್ಲಾವರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಮಿಲ್ಲೆಟ್ ಮಿಷನ್ ಯೋಜನೆ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೯ (೧೫೭೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಿಲ್ಲೆಟ್ ಮಿಷನ್ ಯೋಜನೆಯಡಿಯಲ್ಲಿ ಕೇಂದ್ರದಿಂದ ಎಷ್ಟು ಹಣ ಬಂದಿದೆ ;

(ಆ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಸಿರಿ ಧಾನ್ಯ ಬೆಳೆಗೆ ರೈತರಿಗೆ ಪ್ರೋತ್ಸಾಹ ಧನ ನೀಡಲಾಗಿದೆಯೇ ;

(ಇ) ಮಿಲ್ಲೆಟ್ ಮಿಷನ್ ಯೋಜನೆಯ ಅಡಿಯಲ್ಲಿ ಶಿವಮೊಗ್ಗ ಜಿಲ್ಲೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ;

(ಈ) ರಾಜ್ಯದಲ್ಲಿ ಶಾಲಾ ಮಕ್ಕಳಿಗೆ ಸಿರಿಧಾನ್ಯದ ಮಧ್ಯಾಹ್ನದ ಊಟ ನೀಡುವ ಯೋಜನೆ ಇದೆಯೇ ;

(ಉ) ಮಿಲ್ಲೆಟ್ ಮಿಷನ್ ಯೋಜನೆಯಡಿಯಲ್ಲಿ ರಾಜ್ಯ ಇದುವರೆಗೂ ಸಾಧಿಸಿರುವ ಪ್ರಗತಿಯೇನು ? (ವರದಿ ನೀಡುವುದು)

## ರಾಜ್ಯದಲ್ಲಿ ಸಖಿ–೧ ಸ್ಟಾಪ್ ಸೆಂಟರ್ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೦ (೧೫೮೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಖಿ–೧ ಸ್ಟಾಪ್ ಸೆಂಟರ್ ಯಾವ ಯಾವ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ; (ವಿವರ ಒದಗಿಸುವುದು)

(ಆ) ಇದುವರೆಗೆ ಈ ಕೇಂದ್ರದಿಂದ ಎಷ್ಟು ಮಂದಿ ಮಹಿಳೆಯರು ಪ್ರಯೋಜನ ಪಡೆದಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಭವಿಷ್ಯದಲ್ಲಿ ತಾಲ್ಲೂಕು ಮಟ್ಟದಲ್ಲಿ ಇಂತಹ ಕೇಂದ್ರಗಳನ್ನು ತೆರೆಯುವ ಯೋಜನೆ ಇದೆಯೇ ;

(ಈ) ಇಂತಹ ಕೇಂದ್ರಗಳಿಗೆ ಖಾಯಂ ಸಿಬ್ಬಂದಿಗಳನ್ನು ನೇಮಿಸುವ ಯೋಜನೆ ಇದೆಯೇ ;

(ಉ) ಮೈಸೂರು ವಿ.ವಿ ಸಿ.ಎಸ್.ಎಸ್.ಇ.ಐ.ಪಿ ಅಧ್ಯಯನ ಕೇಂದ್ರ ಹೊರತಂದಿರುವ ಮೌಲ್ಯಮಾಪನ ವರದಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಜ್ಯದಲ್ಲಿ ಗೃಹಲಕ್ಷ್ಮಿ ಯೋಜನೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೧ (೧೫೮೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಂದ ಪ್ರತಿ ಮನೆಗೆ ಸರಾಸರಿ ೫೦ ರಿಂದ ೫೫ ಸಾವಿರ ವಾರ್ಷಿಕ ಆದಾಯ ಹೆಚ್ಚಾಗಲಿದೆ ಎಂದು ಭರವಸೆ ನೀಡಿದ್ದು ಇದು ಪೂರ್ಣವಾಗಿ ಫಲಿಸಿದೆಯೇ ;

(ಆ) ಕಳೆದ ೨ ವರ್ಷದಿಂದ ಗೃಹಲಕ್ಷ್ಮಿ ಯೋಜನೆಯಡಿ ಮಾಹೆವಾರು ಹಣ ಬಿಡುಗಡೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹಣ ಬಿಡುಗಡೆ ಮಾಡಲು ಕೈಗೊಂಡ ಕ್ರಮವೇನು ;

(ಇ) ಗೃಹಲಕ್ಷ್ಮಿ ಯೋಜನೆಯಡಿಯಲ್ಲಿ ಮಾಹೆವಾರು ಹಣ ಬಿಡುಗಡೆ ಆಗದಿರಲು ಸರ್ಕಾರದ ಮುಂದಿರುವ ಸಮಸ್ಯೆಗಳೇನು ; ಇದುವರೆಗೆ ಮಾಹೆವಾರು ಬಿಡುಗಡೆ ಆಗಿರುವ ಹಣ ಎಷ್ಟು ? (ವಿವರ ಒದಗಿಸುವುದು)

# ಸಿಂಧನೂರು ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೨ (೧೫೨೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಶಾಲಾ/ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರದ ಕಟ್ಟಡಗಳಲ್ಲಿ ಹಾಗೂ ಖಾಸಗಿ ಕಟ್ಟಡಗಳಲ್ಲಿ ನಡೆಯುತ್ತಿರುವ ಶಾಲಾ/ಕಾಲೇಜುಗಳು ಹಾಗೂ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ಮಾಹಿತಿ ಹಾಗೂ ವಿವರವನ್ನು ಒದಗಿಸುವುದು)

(ಇ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಶಿಕ್ಷಣ ಸಂಸ್ಥೆಗಳಲ್ಲಿ ಮಂಜೂರಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ೨೦೨೩–೨೪ ರಿಂದ ಪ್ರಸ್ತುತ ಅವಧಿಗೆ ಸಿಂಧನೂರು ತಾಲ್ಲೂಕಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಅನುದಾನವೆಷ್ಟು ; ಯಾವ ಯಾವ ಯೋಜನೆಗಳಿಗೆ ಈ ಅನುದಾನ ಮಂಜೂರು ಮಾಡಲಾಗಿದೆ ?

# IT-BT ಸ್ಥಾಪನೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೩ (೧೫೨೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಶಕ್ತಿನಗರ ಹಾಗೂ ಹಟ್ಟಿ ಚಿನ್ನದ ಗಣಿ ಹೊರತುಪಡಿಸಿ ಯಾವುದೇ ಕೈಗಾರಿಕೆಗಳು ರಾಯಚೂರಿನಲ್ಲಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಈ ಪ್ರದೇಶ ೩೭೧ಜೆ ಕಲಂ ಅಡಿಯಲ್ಲಿ ಹಾಗೂ ಇದು ೩ನೇ ವಲಯದ ನಗರ ಉತ್ತೇಜನ ಯೋಜನೆ ಅಡಿಯಲ್ಲಿ ಬರುವುದರಿಂದ ಇಲ್ಲಿನ ಯುವಕ/ಯುವತಿಯರಿಗೆ ಉದ್ಯೋಗ ಕಲ್ಪಿಸುವ ಸಂಬಂಧ ಇಲ್ಲಿ IT-BT ಸಂಸ್ಥೆಗಳನ್ನು ಸ್ಥಾಪಿಸುವ ಬಗ್ಗೆ ಸರ್ಕಾರದ ನಿಲುವೇನು ?

# ಕೃಷಿ ಯಂತ್ರಧಾರೆ ಯೋಜನೆಯಡಿಯಲ್ಲಿನ ಸಬ್ಸಿಡಿ ನೀಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೪ (೧೫೨೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಎಫ್.ಪಿ.ಓ (FPO)ಗಳಿಗೆ ಕೃಷಿ ಯಂತ್ರಧಾರೆ ಯೋಜನೆಯಡಿ ಎಷ್ಟು ಸಬ್ಸಿಡಿ ಹಣ ನೀಡಲಾಗಿದೆ ;

(ಆ) ಎಷ್ಟು ಹಾರ್ವೇಸ್ಟರ್ ಟ್ರಾಕ್ಟರ್‌ಗಳನ್ನು ವಿತರಿಸಲಾಗಿದೆ ; ಇದರಿಂದ ಎಷ್ಟು ರೈತರಿಗೆ ಅನುಕೂಲ ಆಗಿದೆ ? (ವಿವರಗಳನ್ನು ಒದಗಿಸುವುದು)

# ಹೊರಗುತ್ತಿಗೆ ನೌಕರರ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೧೫ (೧೫೫೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಮೂಲಕ 'ಡಿ' ದರ್ಜೆ ಮತ್ತು ವಾಹನ ಚಾಲಕರನ್ನು ನೇಮಿಸಿಕೊಳ್ಳಲು ಕಾರ್ಮಿಕ ಇಲಾಖೆಯಿಂದ ಎಷ್ಟು ಕನಿಷ್ಠ ವೇತನವನ್ನು ನಿಗದಿಪಡಿಸಿದೆ ; ಈ ವೇತನವು ಯಾವಾಗಿನಿಂದ ಜಾರಿಗೆ ಬಂದಿದೆ ;

(ಆ) ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡಿರುವ ವಾಹನ ಚಾಲಕ ಮತ್ತು 'ಡಿ' ಗ್ರೂಪ್ ನೌಕರರಿಗೆ ನಿಗದಿಪಡಿಸಿರುವ ವೇತನವೆಷ್ಟು ; ಇವರಿಗೆ ಎಷ್ಟು ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆ ಮಾಡಲಾಗುವುದು ; ಸದರಿ ನೌಕರರುಗಳಿಗೆ ಇ.ಎಸ್.ಐ. ಮತ್ತು ಇ.ಪಿ.ಎಫ್. ಸೌಲಭ್ಯಗಳು ಲಭ್ಯವಿದೆಯೇ ; (ಹಾಗಿದ್ದಲ್ಲಿ, ಸೌಲಭ್ಯದ ಸಂಪೂರ್ಣ ವಿವರ ನೀಡುವುದು)

(ಇ) ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡಿರುವ ಸದರಿ ನೌಕರರುಗಳಿಗೆ ೭ನೇ ವೇತನ ಆಯೋಗದ ವರದಿ ಮೇರೆಗೆ ವೇತನ ಪರಿಷ್ಕರಣೆ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವಾಗಿನಿಂದ ಸದರಿ ವೇತನವನ್ನು ಪರಿಷ್ಕರಣೆ ಮಾಡಲಾಗುವುದು ;

(ಈ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಎಷ್ಟು ಸಿಬ್ಬಂದಿಗಳನ್ನು ಯಾವ್ಯಾವ ಹುದ್ದೆಗಳಿಗೆ ಹೊರಗುತ್ತಿಗೆ ಮೂಲಕ ಸಿಬ್ಬಂದಿಯನ್ನು ಪಡೆಯಲಾಗಿದೆ ; (ಇಲಾಖಾವಾರು, ಹುದ್ದೆವಾರು ವಿವರ ನೀಡುವುದು)

(ಉ) ಸರಿಯಾಗಿ ವೇತನ, ಇ.ಎಸ್.ಐ., ಇ.ಪಿ.ಎಫ್. ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಏಜೆನ್ಸಿಗಳ ವಿರುದ್ಧ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ?

# ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಆಗದಿರುವ ರಸ್ತೆಯನ್ನು ಸರಿಪಡಿಸುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೬ (೧೫೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಕೋಲಾರ ಜಿಲ್ಲೆಯಲ್ಲಿ ಇದುವರೆಗೂ ಕುಡಿಯುವ ನೀರಿನ ಸಂಪರ್ಕವನ್ನು ನೀಡಲಾಗಿರುವ ಹಾಗೂ ಇನ್ನು ಬಾಕಿ ಉಳಿದಿರುವ ಮನೆಗಳ ಸಂಖ್ಯೆ ಎಷ್ಟು; (ಗ್ರಾಮವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷದಿಂದ ಇಲ್ಲಿಯವರೆಗೂ ಈ ಯೋಜನೆಯಡಿಯಲ್ಲಿ ಎಷ್ಟು ಅನುದಾನ ಬಂದಿದೆ ; ಇದರಲ್ಲಿ ಖರ್ಚು ಮಾಡಲಾದ ಹಾಗೂ ಉಳಿಕೆಯಾಗಿರುವ ಹಣವೆಷ್ಟು ;

(ಇ) ಮನರೇಗಾ ಯೋಜನೆಯಡಿ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಕಾಂಕ್ರೀಟ್ ರಸ್ತೆಗಳನ್ನು ನಿರ್ಮಿಸಲಾಗಿದೆ. ಆದರೆ ಜಲ ಜೀವನ್ ಮಿಷನ್ ಕಾಮಗಾರಿಗಾಗಿ ರಸ್ತೆ ಅಗೆದ ಬಳಿಕ ಸಮರ್ಪಕವಾಗಿ ಗುತ್ತಿಗೆದಾರರು ದುರಸ್ಥಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪೈಪ್‌ಲೈನ್ ಕಾಮಗಾರಿ ನಡೆಸುವಂತಹ ಸಂದರ್ಭದಲ್ಲಿ ಗುತ್ತಿಗೆದಾರರು ಒಂದು ಮೀಟರ್ ಅಳದಲ್ಲಿ ಪೈಪ್ ಅಳವಡಿಸಬೇಕೆಂಬ ನಿಯಮ ಇದೆಯೇ, ಹಾಗಿದ್ದರೆ, ಗುತ್ತಿಗೆದಾರರು ಕೇವಲ ಅರ್ಧ ಮೀಟರ್ ಆಳದಲ್ಲಿ ಪೈಪ್ ಅಳವಡಿಸುತ್ತಿದ್ದಾರೆ. ಇದರೊಂದಿಗೆ ಪೈಪ್‌ಲೈನ್ ಉದ್ದದಲ್ಲಿಯೂ ಮೋಸ ಮಾಡಲಾಗುತ್ತಿದೆ ಎಂಬ ದೂರುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಟೆಂಡರ್‌ನಲ್ಲಿ ಭಾಗವಹಿಸಲು ಹಾಗೂ ಕಾಮಗಾರಿಯ ಗುತ್ತಿಗೆ ನೀಡುವ ಸಂದರ್ಭದಲ್ಲಿ ಸರ್ಕಾರದಿಂದ ರೂಪಿಸಿರುವ ನೀತಿ–ನಿಯಮ ಹಾಗೂ ಮಾನದಂಡಗಳು ಯಾವುವು ?

## ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೆ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೭ (೧೫೩೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೫ ವರ್ಷದಿಂದ ಹಿಂದುಳಿದ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ಕೋರ್ಸ್ ವಿದ್ಯಾರ್ಥಿಗಳಿಗೆ ನೀಡಿರುವ ವಿದ್ಯಾರ್ಥಿ ವೇನತದ ಮೊತ್ತವೆಷ್ಟು ;

(ಆ) ಈ ಇಲಾಖೆಯಲ್ಲಿ ಅನುದಾನದ ಕೊರತೆಯಿಂದ ಕಳೆದ ೦೪ ವರ್ಷಗಳಿಂದ ಸುಮಾರು ೨೬೩.೫೯ ಕೋಟಿ ರೂ.ವಿದ್ಯಾರ್ಥಿ ವೇತನವನ್ನು ಬಾಕಿ ಉಳಿಸಿಕೊಂಡಿರುವುದು ನಿಜವೇ ;

(ಇ) ಕಳೆದ ೦೪ ವರ್ಷದಿಂದ ಇಲ್ಲಿಯವರೆಗೂ ವಿದ್ಯಾರ್ಥಿ ವೇತನಕ್ಕಾಗಿ ಬಂದಂತಹ ಅರ್ಜಿಗಳ ಸಂಖ್ಯೆಯೆಷ್ಟು ; ಇದರಲ್ಲಿ ಅರ್ಹತೆವುಳ್ಳವರು ಹಾಗೂ ಅರ್ಹತೆ ಇಲ್ಲದವರ ಸಂಖ್ಯೆಯೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಅರ್ಹತೆವುಳ್ಳ ಎಲ್ಲಾ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿ ವೇತನ ನೀಡಲಾಗಿದೆಯೇ ;

(ಉ) ಮೆಟ್ರಿಕ್ ನಂತರದ ಕೋರ್ಸ್‌ಗಳ ವಿದ್ಯಾರ್ಥಿಗಳು ಯಾವ ಯಾವ ಯೋಜನೆಯಡಿಯಲ್ಲಿ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಾಗಿರುತ್ತಾರೆ ?

## ಭಿಕ್ಷುಕರ ಸೆಸ್ ಹಣ ಬಾಕಿ ಉಳಿಸಿಕೊಂಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೮ (೧೫೩೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಮತ್ತು ಗ್ರಾಮಾಂತರ ಸ್ಥಳೀಯ ಸಂಸ್ಥೆಗಳಿಂದ ಕಳೆದ ೧೦ ವರ್ಷಗಳಲ್ಲಿ ಎಷ್ಟು ಭಿಕ್ಷುಕರ ಉಪಕರವನ್ನು ಸಂಗ್ರಹಿಸಲಾಗಿದೆ ; (ವರ್ಷವಾರು ವಿವರ ನೀಡುವುದು)

(ಆ) ಈ ಭಿಕ್ಷುಕರ ಉಪಕರವನ್ನು ಎಲ್ಲಾ ನಗರ ಮತ್ತು ಗ್ರಾಮಾಂತರ ಸ್ಥಳೀಯ ಸಂಸ್ಥೆಗಳು ಸಮಾಜ ಕಲ್ಯಾಣ ಇಲಾಖೆಗೆ ವರ್ಗಾಯಿಸಿರುತ್ತದೆಯೇ ; ಹಾಗಿದ್ದಲ್ಲಿ, ಜಮೆಯಾದ ಮತ್ತು ಬಾಕಿ ಜಮೆ ಮಾಡಲು ಉಳಿಕೆಯಿರುವ ಮೊತ್ತವೆಷ್ಟು ;

(ಇ) ಈ ರೀತಿ ಸಂಗ್ರಹಿಸಲಾದ ಭಿಕ್ಷುಕರ ಉಪಕರವನ್ನು ಯಾವ ಯಾವ ಕಾರ್ಯಗಳಿಗೆ ಎಷ್ಟೆಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಪ್ರಸ್ತುತ ಲಭ್ಯವಿರುವ ಭಿಕ್ಷುಕರ ಬಾಕಿ ಉಪಕರದ ಮೊತ್ತವೆಷ್ಟು ?

## ಹಿರಿಯ ನಾಗರೀಕರ ಹಗಲು ಯೋಗಕ್ಷೇಮ ಪ್ರಾರಂಭಿಸುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೯ (೧೫೨೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಸಂಘ ಸಂಸ್ಥೆ ಟ್ರಸ್ಟ್‌ರವರು ಹಿರಿಯ ನಾಗರೀಕರ ಹಗಲು ಯೋಗಕ್ಷೇಮ ಕೇಂದ್ರ ಹಾಗೂ ವೃದ್ಧಾಶ್ರಮವನ್ನು ಪ್ರಾರಂಭಿಸಲು ಇರುವ ನೀತಿ ನಿಯಮಗಳು ಯಾವುವು ; (ಎಷ್ಟು ಕೊಠಡಿ

ಕಟ್ಟಡದ ಅಳತೆ ಹಾಗೂ ಇನ್ನಿತರ ಸೌಲಭ್ಯಗಳ ಮಾಹಿತಿಯನ್ನು ಹಾಗೂ ಯಾವುದಾದರೊಂದು ಟ್ರಸ್ಟ್ ಬೈಲಾ ಪ್ರತಿಗಳನ್ನು ಒದಗಿಸುವುದು)

(ಆ) ಸರ್ಕಾರದ ಅನುದಾನಕ್ಕೆ ಒಳಪಡಬೇಕಾದರೆ ನಿಯಮದಂತೆ ಎಷ್ಟು ಅವಶ್ಯಕತೆ ಇದೆ ;

(ಇ) ಸರ್ಕಾರದ ಅನುದಾನಕ್ಕೆ ಒಳಪಟ್ಟ ನಂತರ ಪ್ರತಿ ವೃದ್ಧರಿಗೆ ಎಷ್ಟು ಅನುದಾನವನ್ನು ನೀಡಲಾಗುವುದು ;

(ಈ) ಪ್ರಸ್ತುತ ಬೆಂಗಳೂರು, ಕೋಲಾರ ಮತ್ತು ಮೈಸೂರಿನಲ್ಲಿ ಖಾಸಗಿ ಸಂಸ್ಥೆ ಮತ್ತು ಅನುದಾನಕ್ಕೆ ಒಳಪಟ್ಟ ಹಗಲು ಯೋಗಕ್ಷೇಮ ಹಾಗೂ ವೃದ್ಧಾಶ್ರಮ ಸಂಸ್ಥೆಗಳ ಸಂಖ್ಯೆ ಎಷ್ಟು ? (ವಿವರಗಳನ್ನು ಒದಗಿಸುವುದು)

## ಕೊಪ್ಪಳ ಜಿಲ್ಲಾ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೂ ವಿವಿಧ ಇಲಾಖೆಗಳಿಂದ ಬಿಡುಗಡೆಯಾದ ಅನುದಾನ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೦ (೧೫೮೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಕೊಪ್ಪಳ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೂ ವಿವಿಧ ಇಲಾಖೆಗಳಿಂದ ಯಾವ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ;

(ಆ) ಸದರಿ ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗಾಗಿ ವಿನಿಯೋಗಿಸಲಾಗಿದೆ ; (ಲೆಕ್ಕ ಶೀರ್ಷಿಕೆವಾರು ಮತ್ತು ಇಲಾಖಾವಾರು ಸಂಪೂರ್ಣ ವಿವರ ನೀಡುವುದು)

(ಇ) ಲೋಕೋಪಯೋಗಿ, ಜಲಸಂಪನ್ಮೂಲ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಶಿಕ್ಷಣ ಇಲಾಖೆಗಳಿಗೆ ವಿಶೇಷವಾಗಿ

ಬಿಡುಗಡೆಯಾಗಿರುವ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಯಾವ ಯಾವ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ವಿನಿಯೋಗಿಸಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆಯಾಗಿರುವ ವಿಶೇಷ ಅನುದಾನಗಳಾವುವು ; ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಯಾವ ಯಾವ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ವಿನಿಯೋಗಿಸಲಾಗಿದೆ ? (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

## ೧೯೯೮ರ ಕೆ.ಪಿ.ಎಸ್.ಸಿ ಬ್ಯಾಚ್‌ನಿಂದ ಸಮಾಜ ಕಲ್ಯಾಣ ಇಲಾಖೆಯ ನೇಮಕಾತಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೧ (೧೫೮೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಪಿ.ಎಸ್.ಸಿ ೧೯೯೮ರ ಅಧಿಕಾರಿಗಳ ವೃಂದದಿಂದ ೨ನೇ ಅಂತಿಮ ಆಯ್ಕೆ ಪಟ್ಟಿ ಅನ್ವಯ ಸಮಾಜ ಕಲ್ಯಾಣ ಇಲಾಖೆಗೆ ಬಂದು ಬದಲಿ ಹುದ್ದೆಗೆ ವರದಿ ಮಾಡಿಕೊಂಡ ಅಧಿಕಾರಿಗಳು ಎಷ್ಟು ; ಬದಲಿ ಹುದ್ದೆಗೆ ಹೋದವರೆಷ್ಟು ; (ಹುದ್ದೆ ಮತ್ತು ಹೆಸರಿನೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಅಂದರೆ ೧೯೯೮ರ ಬ್ಯಾಚ್‌ನಿಂದ ಸಮಾಜ ಕಲ್ಯಾಣ ಇಲಾಖೆಯಲ್ಲಿ ಇರಬೇಕಾದ ಅಪರ ನಿರ್ದೇಶಕರು ಹೆಚ್ಚಿನ ಸಂಖ್ಯೆಯಲ್ಲಿ ಇಲಾಖೆಯಿಂದ ಹೋಗಬೇಕಾದವರು ನ್ಯಾಯಾಲಯದ ತಡೆಯಾಜ್ಞೆ ಇದೆಯೆಂದು ಮುಂದುವರೆಯುತ್ತಿದ್ದಾರೆ ; ನ್ಯಾಯಾಲಯದ ತಡೆಯಾಜ್ಞೆ ತೆರವುಗೊಳಿಸಿರುವುದನ್ನು ಬಿಡುಗಡೆ ಗೊಳಿಸುವುದು ಯಾವಾಗ ; (ವಿವರವಾದ ಮಾಹಿತಿ ನೀಡುವುದು)

(ಇ) ಇದರಿಂದ ಕಿರಿಯರಿಗೆ ಪದೋನ್ನತಿಯಲ್ಲಿ ಅನ್ಯಾಯವಾಗುವುದಿಲ್ಲವೇ ; ಈ ಸಂಬಂಧ ಇಲಾಖೆ ಕೈಗೊಂಡ ಕ್ರಮವೇನು ? (ವಿವರವಾದ ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಬರುವ ನಿಗಮಗಳಿಗೆ ಅನುದಾನದ ಬಗ್ಗೆ

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೨ (೧೩೮೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಗೆ ಕಳೆದ ಎರಡು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಬರುವ ನಿಗಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ನಿಗಮವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಖರ್ಚು ಮಾಡಿದ ಅನುದಾನವೆಷ್ಟು ; ಉಳಿಕೆಯಾದ ಅನುದಾನವೆಷ್ಟು ; ಯಾವ ಯಾವ ಕಾಮಗಾರಿಗೆ ಎಷ್ಟೆಷ್ಟು ಹಣವನ್ನು ಖರ್ಚು ಮಾಡಲಾಗಿದೆ ; (ಕ್ಷೇತ್ರವಾರು, ಯೋಜನೆವಾರು, ಫಲಾನುಭವಿಗಳವಾರು ಮಾಹಿತಿ ನೀಡುವುದು)

(ಇ) ನಿಗಮಗಳಿಂದ ಕಳೆದ ಎರಡು ವರ್ಷಗಳಲ್ಲಿ ಕೊಳವೆ ಬಾವಿ ಕೊರೆಯಲು ಬಿಡುಗಡೆಯಾದ ಅನುದಾನವೆಷ್ಟು ;

(ಈ) ಬಿಡುಗಡೆಯಾದ ಅನುದಾನದಲ್ಲಿ ಕೊಳವೆ ಬಾವಿಯನ್ನು ಕೊರೆಯಲಾಗಿದೆಯೇ ; ಕೊರಿಸದೆ ಬಾಕಿ ಉಳಿದಿರುವ ಕಾಮಗಾರಿಗಳೆಷ್ಟು ? (ಕ್ಷೇತ್ರವಾರು ನಿಗಮವಾರು ಫಲಾನುಭವಿಗಳವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕಟ್ಟಡ ಕಾರ್ಮಿಕ ಕಲ್ಯಾಣಕ್ಕೆ ಮೀಸಲಿಟ್ಟ ಮೊತ್ತದ ಬಗ್ಗೆ

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೩ (೧೩೮೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಟ್ಟಡ ಕಾರ್ಮಿಕ ಕಲ್ಯಾಣಕ್ಕೆ ಮೀಸಲಿಟ್ಟ ನಿಧಿಯಲ್ಲಿ ಕಳೆದ ೨ ವರ್ಷದಲ್ಲಿ ಎಷ್ಟು ವೆಚ್ಚವಾಗಿದೆ ; ವೆಚ್ಚವಾದ ಮೊತ್ತದಲ್ಲಿ ಯಾವ ಯಾವ ಪ್ರಕರಣಗಳಿಗೆ ವ್ಯಯವಾಗಿದೆ ಮತ್ತು ಉಳಿದಿರುವ ನಿಧಿಯ ಮೊತ್ತವೆಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಆ) ರಾಜ್ಯದಲ್ಲಿ ಕಟ್ಟಡ ಕಾರ್ಮಿಕ ಕಲ್ಯಾಣ ನಿಧಿಗೆ ಕಳೆದೆರಡು ವರ್ಷದಲ್ಲಿ ವರ್ಷವಾರು ಎಷ್ಟು ಮೊತ್ತ ಸಂಗ್ರಹಿಸಲಾಗಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಇ) ರಾಜ್ಯ ಸರ್ಕಾರವು ಬುಡಕಟ್ಟು ಕಾರ್ಮಿಕರ ಕಲ್ಯಾಣಕ್ಕಾಗಿ ಮೀಸಲಿಟ್ಟಿರುವ ನಿಧಿಯಲ್ಲಿ ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಹಾಗೂ ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ವಸತಿ ನಿರ್ಮಾಣಕ್ಕೆ ಹಣವನ್ನು ವರ್ಗಾಹಿಸಿದೆಯೇ ; ವರ್ಗಾವಣೆ ಮಾಡಿದ್ದಲ್ಲಿ, ಅದರ ಸಂಪೂರ್ಣ ಮಾಹಿತಿಯನ್ನು ನೀಡುವುದು ;

(ಈ) ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕರ ನೊಂದಾವಣೆಮಾಡಲಾಗಿದೆಯೇ ; ಮಾಡಿದ್ದಲ್ಲಿ, ಸಂಖ್ಯೆ ಎಷ್ಟು ? (ಜಿಲ್ಲಾ ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿಯನ್ನು ನೀಡುವುದು)

## ಮಂಗಳೂರು ಸಹಾಯಕ ಕಾರ್ಮಿಕ ಕಮೀಷನರ್ ವ್ಯಾಪ್ತಿಯಲ್ಲಿರುವ ನೋಂದಾಯಿತ ಕಟ್ಟಡ ಕಾರ್ಮಿಕರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೪ (೧೫೫೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಸಹಾಯಕ ಕಾರ್ಮಿಕ ಕಮೀಷನರ್ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ನೋಂದಾಯಿತ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈವರೆಗೆ ನೋಂದಾಯಿತ ಅಸಂಘಟಿತ ಖಾಸಗಿ ವಾಣಿಜ್ಯ ಮೋಟಾರು ಸಾರಿಗೆ ಮತ್ತು ಸಂಬಂಧಪಟ್ಟ ಕಾರ್ಮಿಕರನ್ನು ಸಾಮಾಜಿಕ ಭದ್ರತೆ ಯೋಜನೆಗೆ ನೋಂದಾಯಿಸಲಾಗಿದೆ ; ನೋಂದಾಯಿಸಲು ಇರುವ ಅವಧಿ ಎಷ್ಟು ; ಅರ್ಹತೆಗಳೇನು ; (ವಿವರ ನೀಡುವುದು)

(ಇ) ಈವರೆಗೆ ಈ ಅಸಂಘಟಿತ ಖಾಸಗಿ ವಾಣಿಜ್ಯ ಮೋಟಾರು ಸಾರಿಗೆ ಚಾಲಕರ ನಿಧಿಯಲ್ಲಿ ಸಂಗ್ರಹಿಸಿದ ಮೊತ್ತ ಎಷ್ಟು ; ಎಷ್ಟು ಮಂದಿಗೆ ಪರಿಹಾರ ಒದಗಿಸಲಾಗಿದೆ ; (ವಿವರ ನೀಡುವುದು)

(ಈ) ಕರ್ನಾಟಕ ಅಸಂಘಟಿತ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಿಗೆ ನೋಂದಾಯಿಸಿದವರಿಗೆ ಇನ್ನೂ ಸ್ಮಾರ್ಟ್ ಕಾರ್ಡ್ ನೀಡಿರುವುದಿಲ್ಲ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಎಷ್ಟು ಮಂದಿಗೆ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಕಟ್ಟಡ ಕಾರ್ಮಿಕರ ಹೆಸರಿನಲ್ಲಿ ನಕಲಿ ನೋಂದಾವಣೆ ಮಾಡುತ್ತಿದ್ದು, ಇಲಾಖೆಯ ಹಣ ಮತ್ತು ಸವಲತ್ತುಗಳನ್ನು ದುರುಪಯೋಗ ಮಾಡುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಊ) ಕಟ್ಟಡ ಕಾರ್ಮಿಕರಿಗೆ ಅನ್ಯಾಯವಾದಾಗ ಅವರ ಪರವಾಗಿ ವಾದ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೃಷಿಯನ್ನು ಮಾಡುವ ರೈತರಿಗೆ ಸಲಹೆ ನೀಡುವ ಬಗ್ಗೆ

**ಶ್ರೀ ಐವನ್ 'ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೫ (೧೫೫೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವ ಯಾವ ಕೃಷಿ ಬೆಳೆಯನ್ನು ಬೆಳೆಯಲು ರೈತರಿಗೆ ಸಲಹೆಯನ್ನು ನೀಡಲಾಗಿದೆ ; ಕಬ್ಬು ಬೆಳೆಯನ್ನು ಬೆಳೆಸಲು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾಧ್ಯವಾಗುವುದೇ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭತ್ತದ ಬೆಳೆಯನ್ನು ಬೆಳೆಸಲು ನೀಡುತ್ತಿರುವ ಪ್ರೋತ್ಸಾಹವೇನು ; ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರುಗಳಲ್ಲಿ ಭತ್ತದ ಕೃಷಿಯನ್ನು ಬೆಳೆಸಲಾಗುತ್ತಿದೆ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯ ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; ಇವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಐ.ಟಿ.ಐ ಕಾಲೇಜುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೬ (೧೫೫೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಐ.ಟಿ.ಐ ಕಾಲೇಜುಗಳಿವೆ ; ಇದರಲ್ಲಿ ೨೦೨೩–೨೪, ೨೦೨೪–೨೫ ರಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಖಾಸಗಿ/ ಸರ್ಕಾರಿ ಐ.ಟಿ.ಐ. ಸೀಟುಗಳು ಲಭ್ಯವಿದೆ ; ಎಷ್ಟು ಸೀಟುಗಳು ೨೦೨೩–೨೪, ೨೦೨೪–೨೫ ರಲ್ಲಿ ಖಾಲಿ ಇವೆ ; (ಕಾಲೇಜುವಾರು ವಿವರ ನೀಡುವುದು)

(ಇ) ಐ.ಟಿ.ಐ. ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟವನ್ನು ನೀಡಲಾಗುತ್ತಿದೆಯೇ ; (ಈ ಬಗ್ಗೆ ವಿವರ ನೀಡುವುದು)

(ಈ) ಐ.ಟಿ.ಐ. ಕಲಿತ ವಿದ್ಯಾರ್ಥಿಗಳಿಗೆ ಉದ್ಯೋಗ ದೊರೆಯಲು ಯಾವ ಯಾವ ಅವಕಾಶಗಳನ್ನು ರಾಜ್ಯ ಸರ್ಕಾರ ಸೃಷ್ಟಿಸಿದೆ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಎಷ್ಟು ಹುದ್ದೆಗಳು ಇಲಾಖೆಯಲ್ಲಿ ಖಾಲಿ ಇವೆ ; ಇವುಗಳನ್ನು ಯಾವಾಗ ಭರ್ತಿಗೊಳಿಸಲಾಗುವುದು ; (ವಿವರ ನೀಡುವುದು)

(ಊ) ರಾಜ್ಯದಲ್ಲಿ ೨೦೨೪–೨೫ ರಲ್ಲಿ ಎಷ್ಟು ಐ.ಟಿ.ಐಗಳು ಖಾಸಗಿ ಸಂಸ್ಥೆಗಳು ಎಷ್ಟು ಸರ್ಕಾರಿ ಸಂಘಗಳನ್ನು ತೆರೆದಿವೆ ? (ಜಿಲ್ಲಾವಾರು ವಿವರ ನೀಡುವುದು)

## ಕರ್ನಾಟಕದಲ್ಲಿ ಅಂಗನವಾಡಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೭ (೧೫೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ ಎಷ್ಟು ಅಂಗನವಾಡಿಗಳು ಇವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಎಷ್ಟು ಅಂಗನವಾಡಿಗಳು ಸರ್ಕಾರಿ ಕಟ್ಟಡಗಳನ್ನು ಹೊಂದಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೫ ವರ್ಷಗಳಿಂದ ನಿರ್ಮಾಣ ಹಂತದಲ್ಲಿದ್ದ ಮತ್ತು ಇನ್ನೂ ಪೂರ್ಣಗೊಂಡಿಲ್ಲದ ಅಂಗನವಾಡಿಗಳು ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಎಷ್ಟು ಅಂಗನವಾಡಿಗಳಲ್ಲಿ ಕಾರ್ಯಕರ್ತೆಯರು ಅಥವಾ ಸಹಾಯಕ ಹುದ್ದೆಗಳು ಖಾಲಿ ಇವೆ ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕದಲ್ಲಿ ಕೃಷಿ ಭೂಮಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೮ (೧೫೫೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿರುವ ಒಟ್ಟು ಕೃಷಿ ಪ್ರದೇಶವೆಷ್ಟು ; ಕಳೆದ ೫ ವರ್ಷಗಳ ಡೇಟಾವನ್ನು ವರ್ಷ ಮತ್ತು ಜಿಲ್ಲಾವಾರು ವಿವರ ನೀಡುವುದು ;

(ಆ) ಕರ್ನಾಟಕದಲ್ಲಿ ಕಳೆದ ೫ ವರ್ಷಗಳಲ್ಲಿ ಉತ್ಪಾದಿಸಲಾದ ಒಟ್ಟು ಕೃಷಿ ಆಹಾರ ಧಾನ್ಯಗಳ ಸಂಖ್ಯೆ ಎಷ್ಟು ; ಕಳೆದ ೫ ವರ್ಷಗಳ ಸರಕುವಾರು ವರ್ಷ ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಬೆಳೆ ಸಮೀಕ್ಷೆಯ ವಿವರಗಳನ್ನು ಆರ್‌ಟಿಸಿಗಳಲ್ಲಿ ದಾಖಲಿಸಲು ಅನುಸರಿಸುವ ವಿಧಾನಗಳು ಯಾವುವು ;

(ಈ) ಕರ್ನಾಟಕದಲ್ಲಿ ಆಹಾರ ಧಾನ್ಯ ಉತ್ಪಾದನೆಯನ್ನು ಹೆಚ್ಚಿಸಲು ಸರ್ಕಾರದ ಪ್ರಯತ್ನಗಳೇನು ? (ಸಂಪೂರ್ಣ ವಿವರ ನೀಡುವುದು)

# ಮನರೇಗಾ ಯೋಜನೆಯ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨೯ (೧೫೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈ ಸಾಲಿನಲ್ಲಿ ಮನರೇಗಾ ಯೋಜನೆಗೆ ಸಾರ್ವಜನಿಕರಿಂದ ಅರ್ಜಿ ಸ್ವೀಕರಿಸಲಾಗುತ್ತಿದೆಯೇ ; ಈವರೆಗೆ ಎಷ್ಟು ಅರ್ಜಿಗಳು ಸ್ವೀಕೃತವಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯ ಸರ್ಕಾರದ ಸಬ್ಸಿಡಿ ಪಡಿತರ (Ration Benefits) ಯೋಜನೆ ವಿಜಯಪುರ ಜಿಲ್ಲೆಯಲ್ಲಿ ಸೂಕ್ತವಾಗಿ ಜಾರಿಗೆ ತರುವ ಕುರಿತು ಇಲಾಖೆಯ ವರದಿ ಏನು ;

(ಇ) ವಿಜಯಪುರ ಜಿಲ್ಲೆಯಲ್ಲಿ ಮಹಿಳಾ ಕಾರ್ಮಿಕರಿಗಾಗಿ ಇರುವ ವಿಶೇಷ ಕಲ್ಯಾಣ ಯೋಜನೆಗಳಾವುವು ; ಬಾಲ ಕಾರ್ಮಿಕರ ನಿಯಂತ್ರಣಕ್ಕಾಗಿ ಜಿಲ್ಲೆಯಲ್ಲಿ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಸದರಿ ಜಿಲ್ಲೆಯಲ್ಲಿ ಮಹಿಳಾ ಕಾರ್ಮಿಕರ ಸುರಕ್ಷತೆ, ವಸತಿ ಮತ್ತು ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆಯೇ ; ಸರ್ಕಾರ ಈ ಬಗ್ಗೆ ನಿರ್ದಿಷ್ಟ ತೀರ್ಮಾನ ತೆಗೆದುಕೊಂಡಿದೆಯೇ ; ಕಿರಿಯ ಕಾರ್ಮಿಕರಿಗೆ (Apprenticeship & Skill Training) ವಿಜಯಪುರದಲ್ಲಿ ಕಾರ್ಯಾಚರಿಸುತ್ತಿರುವ ಕೇಂದ್ರಗಳ ಸಂಖ್ಯೆ ಎಷ್ಟು ಮತ್ತು ಅವುಗಳ ಪರಿಣಾಮಕಾರಿತ್ವ ಹೇಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

# ಸ್ವಚ್ಛ ಭಾರತ್ ಮಿಷನ್ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೦ (೧೫೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಎಷ್ಟು ಪಂಚಾಯತ್‌ಗಳಿಗೆ ಕಸ ಎತ್ತುವ ವಾಹನಗಳನ್ನು ಒದಗಿಸಲಾಗಿದೆ ; ಎಷ್ಟು ಪಂಚಾಯತ್‌ಗಳಿಗೆ ವಾಹನಗಳನ್ನು ಒದಗಿಸಲು ಬಾಕಿ ಇದೆ ; ಯಾವಾಗ ಒದಗಿಸಲಾಗುವುದು ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಘನ ತ್ಯಾಜ್ಯ ನಿರ್ವಹಣೆಗಾಗಿ ಎಷ್ಟು ಕಸ ಎತ್ತುವ ವಾಹನಗಳನ್ನು ಬಳಸಲಾಗುತ್ತಿದೆ ; (ತಾಲ್ಲೂಕುವಾರು ವಿವರ ನೀಡುವುದು) ಎಷ್ಟು ವಾಹನಗಳನ್ನು ಹೊಸದಾಗಿ ಖರೀದಿಸಲಾಗಿದೆ ; ಈ ವಾಹನಗಳ ಬೆಲೆ ಎಷ್ಟು ; ಬಾಕಿ ಇರುವ ಪಂಚಾಯತ್‌ಗಳಿಗೆ ಯಾವ ಕಾಲಮಿತಿಯಲ್ಲಿ ಕಸ ಎತ್ತುವ ವಾಹನಗಳನ್ನು ಒದಗಿಸಲಾಗುವುದು ;

(ಇ) ಸದರಿ ಜಿಲ್ಲೆಗಳಲ್ಲಿ ಯಾವೆಲ್ಲ ಪಂಚಾಯತ್‌ಗಳಲ್ಲಿ ಘನ ತ್ಯಾಜ್ಯ ನಿರ್ವಹಣಾ ಘಟಕಗಳನ್ನು ಸ್ಥಾಪಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು) ಸದರಿ ಘಟಕಗಳ ನಿರ್ಮಾಣಕ್ಕೆ ಎಷ್ಟು ಅನುದಾನವನ್ನು ಖರ್ಚು ಮಾಡಲಾಗಿದೆ ; ಎಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣಾ ಘಟಕ ಸ್ಥಾಪಿಸುವ ಯೋಜನೆ ರೂಪಿಸಲಾಗಿದೆಯೇ ;

(ಈ) ಒಂದು ಘನ ತ್ಯಾಜ್ಯ ನಿರ್ವಹಣಾ ಘಟಕ ಸ್ಥಾಪಿಸಲು ತಗಲುವ ವೆಚ್ಚವೆಷ್ಟು ;

(ಉ) ಕಳೆದ ೨ ವರ್ಷಗಳಲ್ಲಿ ಸದರಿ ಜಿಲ್ಲೆಗಳಿಗೆ ಈ ಯೋಜನೆಯಡಿಯಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ವಿಜಯಪುರ ಜಿಲ್ಲೆಯ ಜೆಜೆಎಂ ಕಾಮಗಾರಿಗಳ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೩೧ (೧೫೯೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಗ್ರಾಮಗಳಲ್ಲಿ ಪ್ರಧಾನ ಮಂತ್ರಿ ಜಲಜೀವನ್ ಮಿಷನ್ ಯೋಜನೆಯ ಕಾಮಗಾರಿಗಳು ನಡೆಯುತ್ತಿವೆ ; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸದ ಕಾಮಗಾರಿಗಳು ಎಷ್ಟು ; (ಗ್ರಾಮವಾರು ಕಾಮಗಾರಿಗಳ ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಜೆಜೆಎಂ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳಪೆ ಮಟ್ಟದ ಕಾಮಗಾರಿ ನಡೆಯುತ್ತಿದ್ದರೂ ಅಧಿಕಾರಿಗಳು ಕ್ರಮ ಕೈಗೊಳ್ಳದಿರಲು ಕಾರಣಗಳೇನು ; ಕಳಪೆ ಕಾಮಗಾರಿ ಹಿನ್ನಲೆಯಲ್ಲಿ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೇಂದ್ರ ಸರ್ಕಾರದ ಜನಪರ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಸಿದ್ಧತೆಯಿಲ್ಲದೆ ಕಾಂಟ್ರಾಕ್ಟರ್, ಅಧಿಕಾರಿಗಳ ಒತ್ತಡಕ್ಕೆ ಮಣಿದು ಯೋಜನೆಯನ್ನು ಜಾರಿಗೆ ತಂದಿರುವ ಕಾರಣ ಕಾಮಗಾರಿಯಲ್ಲಿ ಅಕ್ರಮಗಳು ನಡೆಯುತ್ತಿರುವುದು ನಿಜವೇ ? (ಸಂಪೂರ್ಣ ಮಾಹಿತಿ ನೀಡುವುದು)

## ಕಾರ್ಮಿಕ ಮಕ್ಕಳಿಗೆ ನೀಡುತ್ತಿರುವ ಸೌಲಭ್ಯಗಳ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೩೨ (೧೫೫೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಮಿಕ ಇಲಾಖೆ ವ್ಯಾಪ್ತಿಯಲ್ಲಿ ಇರುವ ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ನೀಡುತ್ತಿರುವ ವಿದ್ಯಾರ್ಥಿ ವೇತನ ಎಷ್ಟು ; ಎಷ್ಟು ಜನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಸರ್ಕಾರದಲ್ಲಿ ನೀಡುತ್ತಿದ್ದ ವಿದ್ಯಾರ್ಥಿ ವೇತನ ಎಷ್ಟು ; ವಿದ್ಯಾರ್ಥಿ ವೇತನವನ್ನು ಕಡಿಮೆ ಮಾಡಲು ಕಾರಣಗಳೇನು ; ಈ ವಿಚಾರದಲ್ಲಿ ನ್ಯಾಯಾಲಯ ನೀಡಿರುವ ಸೂಚನೆ ಏನು ; ನ್ಯಾಯಾಲಯದ ಸೂಚನೆಯನ್ನು ಸರ್ಕಾರ ಪಾಲನೆ ಮಾಡದಿರಲು ಕಾರಣಗಳೇನು ; ನ್ಯಾಯಾಲಯದ ಸೂಚನೆಯಂತೆ ವಿದ್ಯಾರ್ಥಿ ವೇತನ ಹೆಚ್ಚಳ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಕಟ್ಟಡ ಕಾರ್ಮಿಕರ ಮತ್ತು ಕೂಲಿ ಕಾರ್ಮಿಕರ ಮಕ್ಕಳಿಗೆ ಇಲಾಖೆ ವತಿಯಿಂದ ನೀಡುತ್ತಿದ್ದ ಸ್ಕೂಲ್ ಕಿಟ್ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಕಾರಣಗಳೇನು ; ಈ ಉದ್ದೇಶಕ್ಕಾಗಿ ಮೀಸಲಿಟ್ಟಿದ್ದ ಅನುದಾನ ಎಷ್ಟು ;

(ಈ) ಮಕ್ಕಳಿಗೆ ಸ್ಕೂಲ್ ಕಿಟ್ ಯೋಜನೆಯನ್ನು ಮುಂದುವರೆಸಲು ಹಾಗೂ ಪ್ರಸಕ್ತ ಸಾಲಿನಿಂದಲೇ ಸ್ಕೂಲ್ ಕಿಟ್ ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಅಂಗನವಾಡಿಗಳ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೩೩ (೧೫೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು ;

(ಆ) ಅಂಗನವಾಡಿ ಮೂಲಸೌಕರ್ಯ ಸುಧಾರಣೆಗೆ (Anganwadi Infrastructure Development) ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಪೌಷ್ಠಿಕ ಆಹಾರ ಯೋಜನೆಯಡಿ (Supplementary Nutrition Program) ವಿಜಯಪುರ ಜಿಲ್ಲೆಯಲ್ಲಿ ಮಕ್ಕಳಿಗೆ ಸೂಕ್ತ ಆಹಾರ ದೊರಕುತ್ತಿದೆಯೇ ;

(ಇ) ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ವೇತನ ಮತ್ತು ಇನ್ನಿತರೆ ಸೌಲಭ್ಯಗಳಾವುದು ; ಇವರಿಗೆ ವೇತನ ಹೆಚ್ಚಳ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ವಿಜಯಪುರ ಜಿಲ್ಲೆಯ ಕಾರ್ಮಿಕರ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೩೪ (೧೫೫೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಕಾರ್ಮಿಕ ವಸತಿ ಯೋಜನೆ (Labour Housing Scheme) ಗಳು ಯಾವ ಹಂತದಲ್ಲಿವೆ ; ಗಡಿ ರಾಜ್ಯಗಳಿಂದ ಬರುವ ವಲಸೆ ಕಾರ್ಮಿಕರಿಗೆ ವಿಜಯಪುರ ಜಿಲ್ಲೆಯಲ್ಲಿ ವಸತಿ, ಪಡಿತರ, ಆರೋಗ್ಯ ಸೇವೆಗಳು ಒದಗಿಸಲು ಸರ್ಕಾರದ ನೀತಿ ಏನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ರಾಜ್ಯ ಸರ್ಕಾರದ ಸಬ್ಸಿಡಿ ಪಡಿತರ (Ration Benefits) ಯೋಜನೆ ವಿಜಯಪುರ ಜಿಲ್ಲೆಯಲ್ಲಿ ಸೂಕ್ತವಾಗಿ ಜಾರಿಗೆ ತರುವ ಕುರಿತು ಇಲಾಖೆಯ ವರದಿ ಏನು ;

(ಇ) ವಿಜಯಪುರ ಜಿಲ್ಲೆಯಲ್ಲಿ ಮಹಿಳಾ ಕಾರ್ಮಿಕರಿಗಾಗಿ ಇರುವ ವಿಶೇಷ ಕಲ್ಯಾಣ ಯೋಜನೆಗಳಾವುವು ; ಬಾಲ ಕಾರ್ಮಿಕರ

ನಿಯಂತ್ರಣಕ್ಕಾಗಿ ಜಿಲ್ಲೆಯಲ್ಲಿ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಸದರಿ ಜಿಲ್ಲೆಯಲ್ಲಿ ಮಹಿಳಾ ಕಾರ್ಮಿಕರ ಸುರಕ್ಷತೆ, ವಸತಿ ಮತ್ತು ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆಯೇ ; ಸರ್ಕಾರ ಈ ಬಗ್ಗೆ ನಿರ್ದಿಷ್ಟ ತೀರ್ಮಾನ ತೆಗೆದುಕೊಂಡಿದೆಯೇ ; ಕಿರಿಯ ಕಾರ್ಮಿಕರಿಗೆ (Apprenticeship & Skill Training) ವಿಜಯಪುರದಲ್ಲಿ ಕಾರ್ಯಾಚರಿಸುತ್ತಿರುವ ಕೇಂದ್ರಗಳ ಸಂಖ್ಯೆ ಎಷ್ಟು ಮತ್ತು ಅವುಗಳ ಪರಿಣಾಮಕಾರಿತ್ವ ಹೇಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಸಮಾಜ ಕಲ್ಯಾಣ ಇಲಾಖೆ ಕೈಗೊಂಡಿರುವ ಸಂವಿಧಾನ ದಿನಾಚರಣೆ, ಪ್ರಜಾಪ್ರಭುತ್ವ ದಿನಾಚರಣೆ, ಪೀಠಿಕೆ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೩೫ (೧೬೦೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ಯಾವ ಯಾವ ದಿನಾಂಕದಂದು ಆಚರಿಸಲಾಗುತ್ತದೆ ; ಈ ಸಂಬಂಧ ಯಾವ ಯಾವ ಕಾರ್ಯಕ್ರಮಗಳನ್ನು ಯಾವ ಯಾವ ದಿನಾಂಕಗಳಂದು ಆಚರಿಸಲಾಗಿರುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಂವಿಧಾನ ದಿನಾಚರಣೆಗೆ ಸಂಬಂಧಿಸಿದಂತೆ ಎಲ್ಲಾ ಕಾರ್ಯಕ್ರಮಗಳನ್ನು ಆಚರಿಸಲು ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನಲ್ಲಿ ಎಷ್ಟು ಮೊತ್ತವನ್ನು ಮೀಸಲಿರಿಸಲಾಗಿದ್ದು, ಎಷ್ಟು ಖರ್ಚಾಗಿದೆ ; ಹಣಕಾಸು ಯಾವ ಮೂಲಗಳಿಂದ

ಬಂದಿದೆ ; ಇದರ Head of Account ಯಾವುದು ; ಇದಕ್ಕೆ ಅನುಮತಿ ನೀಡಿದವರಾರು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸಂವಿಧಾನ ದಿನಾಚರಣೆಯನ್ನು ಆಚರಿಸಲು ಯಾವ ಸಂಸ್ಥೆಯನ್ನು ನೇಮಕ ಮಾಡಲಾಗಿದೆ ; ಅದೇ ಸಂಸ್ಥೆಯನ್ನು ನೇಮಕ ಮಾಡಲು ಕಾರಣವೇನು ; ಸದರಿ ಕಾರ್ಯಕ್ಕೆ ಎಷ್ಟು ಮೊತ್ತವನ್ನು ಪಾವತಿ ಮಾಡಲಾಗಿರುತ್ತದೆ ; (ಹೆಸರು/ಕಂಪನಿ/ಸಂಘ ಸಂಸ್ಥೆಯ ಸಂಪೂರ್ಣ ವಿವರ ನೀಡುವುದು)

(ಈ) ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಮಾನವ ಸರಪಳಿ ಮಾಡಲು ಎಷ್ಟು ವೆಚ್ಚವಾಗಿದೆ ; ಈ ಅನುದಾನವನ್ನು ಎಲ್ಲಿಂದ ಭರಿಸಲಾಗಿದೆ ; ಮಕ್ಕಳ ರಕ್ಷಣೆಯ ಕಾನೂನು ಬಗ್ಗೆ ನಿಮಗೆ ಅರಿವಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಸಂವಿಧಾನದ ದಿನಾಚರಣೆಯ ಅಂಗವಾಗಿ ಸಂವಿಧಾನ ಪೀಠಿಕೆ, ವಾಚನ, ಮುದ್ರಣ, ಪ್ರಸಾರ ಸಂಬಂಧಿತ ಕಾರ್ಯಕ್ರಮಗಳ ಆಚರಣೆಯ ಉದ್ದೇಶವೇನು ; ಉದ್ದೇಶವು ಸಫಲವಾಗಿದೆಯೇ ; ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ ; ಯಾರಿಗೆ ಪಾವತಿಸಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಲೆಕ್ಕ ಪರಿಶೋಧನೆ ಕೈಗೊಳ್ಳದಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೩೬ (೧೫೪೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ, ಮೈಸೂರು, ಹಾಸನ, ಚಾಮರಾಜನಗರ ಜಿಲ್ಲಾ ಪಂಚಾಯತ್ ಅಧೀನ ಕಛೇರಿಗಳ ಆಂತರಿಕ ಲೆಕ್ಕಪರಿಶೋಧನೆಯನ್ನು ಹಾಗೂ

ಅಧೀನ ಕಛೇರಿಗಳ ಲೆಕ್ಕ ಪರಿಶೋಧನೆಯನ್ನು ಕಾಲಕಾಲಕ್ಕೆ ಕೈಗೊಳ್ಳದಿರುವುದು ; ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಯಾವ ವರ್ಷದಿಂದ ಯಾವ ವರ್ಷದವರೆಗೆ ಲೆಕ್ಕ ತಪಾಸಣೆ ಕೈಗೊಳ್ಳಲು ಬಾಕಿ ಇರುತ್ತದೆ ; (ಕಛೇರಿವಾರು ಮಾಹಿತಿ ನೀಡುವುದು)

(ಇ) ೨೦೨೦ರಿಂದ ಈವರೆವಿಗೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಷ್ಟು ಅಧೀನ ಕಛೇರಿಗಳ ಆಂತರಿಕ ಲೆಕ್ಕಪರಿಶೋಧನೆಯನ್ನು ಹಾಗೂ ಅಧೀನ ಕಛೇರಿಗಳ ಲೆಕ್ಕ ಪರಿಶೋಧನೆಯನ್ನು ಕೈಗೊಳ್ಳಲಾಗಿದೆ ; (ವರ್ಷವಾರು ಮಾಹಿತಿ ನೀಡುವುದು)

(ಈ) ಲೆಕ್ಕ ತಪಾಸಣೆ ಸಂದರ್ಭದಲ್ಲಿ ಹಣ ದುರುಪಯೋಗ ಪ್ರಕರಣಗಳು ಕಂಡು ಬಂದಿವೆಯೇ ; (ಇದ್ದಲ್ಲಿ, ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು)

(ಉ) ಸಕಾಲದಲ್ಲಿ ಲೆಕ್ಕ ತಪಾಸಣೆ ಕೈಗೊಳ್ಳದಿರುವುದಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಲೆಕ್ಕ ತಪಾಸಣೆ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಯಾಂತ್ರೀಕೃತ ಭತ್ತದ ನಾಟಿ ಮತ್ತು ಕಬ್ಬು ಕಟಾವು ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೩೭ (೧೫೪೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಭತ್ತದ ನಾಟಿಗೆ ಮತ್ತು ಕಬ್ಬು ಕಟಾವಿಗೆ ಕೃಷಿ ಕಾರ್ಮಿಕರ ಸಮಸ್ಯೆಯಿರುವುದಿಂದ ಇದಕ್ಕೆ ಪರ್ಯಾಯವಾಗಿ ಯಾಂತ್ರೀಕೃತ ಭತ್ತದ ನಾಟಿ ಮತ್ತು ಕಬ್ಬು ಕಟಾವು ಪ್ರೋತ್ಸಾಹಿಸಲು ಕೃಷಿ ಇಲಾಖೆ ಕೈಗೊಂಡ ಕ್ರಮಗಳೇನು ;

(ಆ) ಯಾಂತ್ರೀಕೃತ ಭತ್ತದ ನಾಟಿಗೆ ನೋಂದಣಿ ಮಾಡಿಸಿದ ರೈತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಯಾಂತ್ರೀಕೃತ ಭತ್ತದ ನಾಟಿಯನ್ನು ಎಷ್ಟು ಪ್ರದೇಶದಲ್ಲಿ ಕೈಗೊಳ್ಳಲಾಗಿದೆ ; ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳ ವತಿಯಿಂದ ಎಷ್ಟು ರೈತರಿಗೆ ಯಾಂತ್ರೀಕೃತದ ಮೂಲಕ ಭತ್ತದ ನಾಟಿ ಮಾಡಿಸಿ ಕೊಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಪ್ರತಿ ಎಕರೆ ಅಥವಾ ಒಂದು ತಾಸು ಭತ್ತದ ನಾಟಿಗೆ ರೈತರು ಭರಿಸಬೇಕಾದ ವೆಚ್ಚವೆಷ್ಟು ;

(ಉ) ಯಾಂತ್ರೀಕೃತ ಕಬ್ಬು ಕಟಾವಿಗೆ ರೈತರು ಆಸಕ್ತಿ ತೋರುತ್ತಿದ್ದಾರೆಯೇ ; ಸಬ್ಸಿಡಿಯಲ್ಲಿ ಎಷ್ಟು ಯಂತ್ರ ಖರೀದಿಸಿದ್ದಾರೆ ? (ವಿವರ ನೀಡುವುದು)

## ತಾಲ್ಲೂಕು ಯೋಜನಾಧಿಕಾರಿಗಳಿಗೆ ಕರ್ತವ್ಯ (ಜಾಬ್‌ಚಾರ್ಟ್‌ನಂತೆ) ಹಂಚಿಕೆ ಮಾಡದಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೩೮ (೧೫೪೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯೋಜನಾ ಇಲಾಖೆಯಿಂದ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳಿಗೆ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ಒಟ್ಟು ಯೋಜನಾಧಿಕಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರದ ಕಾರ್ಯಪಟ್ಟಿಯಂತೆ (ಜಾಬ್‌ಚಾರ್ಟ್) ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು ; ತಾಲ್ಲೂಕು ಯೋಜನಾಧಿಕಾರಿಗಳಿಗೆ ಕಾರ್ಯಪಟ್ಟಿಯನ್ನು ಹಂಚಿಕೆ ಮಾಡಿದ್ದಾರೆಯೇ ;

(ಇ) ಇದ್ದಲ್ಲಿ, ಕಾರ್ಯಪಟ್ಟಿ ಪ್ರಕಾರ ಯಾವ ಯಾವ ಕಾರ್ಯಗಳನ್ನು ಹಂಚಿಕೆ ಮಾಡಿದ್ದಾರೆ ; ಇನ್ನೂ ಯಾವ ಯಾವ ತಾಲ್ಲೂಕುಗಳಲ್ಲಿ ಯೋಜನಾಧಿಕಾರಿಗಳಿಗೆ ಕಾರ್ಯಗಳನ್ನು ಹಂಚಿಕೆ ಮಾಡಿರುವುದಿಲ್ಲ ; (ಸೂಕ್ತ ಕಾರಣದೊಂದಿಗೆ ವಿವರ ನೀಡುವುದು)

(ಈ) ಮಂಡ್ಯ ಸೇರಿದಂತೆ ಕೆಲವು ಜಿಲ್ಲೆಗಳಲ್ಲಿ ಯೋಜನಾಧಿಕಾರಿಗಳಿಗೆ ಕಾರ್ಯಪಟ್ಟಿಯಂತೆ ಕಾರ್ಯಗಳನ್ನು ಹಂಚಿಕೆ ಮಾಡದಿರುವುದು ಜಿಲ್ಲಾ ಪಂಚಾಯತ್ ಸಿ.ಇ.ಓ. ಅವರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈವರೆವಿಗೂ ಏಕೆ ಕ್ರಮ ಕೈಗೊಂಡಿಲ್ಲ ; (ವಿವರ ನೀಡುವುದು)

(ಉ) ಕಾರ್ಯಪಟ್ಟಿಗಳನ್ನು ಹಂಚಿರುವ ಹಾಗೂ ಹಂಚದಿರುವ ಮಾಹಿತಿಯನ್ನು ಒದಗಿಸುವುದು ?

## ಜೆ.ಜೆ.ಎಂ. ಯೋಜನೆಗೆ ವಿಶ್ವಬ್ಯಾಂಕಿನಿಂದ ಆರ್ಥಿಕ ನೆರವು ಪಡೆಯುತ್ತಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೩೭೯ (೧೫೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಗೆ ರಾಜ್ಯ ಸರ್ಕಾರದಿಂದ ಪಾವತಿಸಲು ನಿಗದಿಪಡಿಸಿರುವ ಮೊತ್ತವೆಷ್ಟು ;

(ಆ) ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಗೆ ವಿಶ್ವಬ್ಯಾಂಕ್‌ನಿಂದ ಪಡೆಯುಲಾಗುತ್ತಿರುವ ಸಾಲದ ಮೊತ್ತವೆಷ್ಟು ;

(ಇ) ಸದರಿ ಸಾಲದ ಮೊತ್ತವನ್ನು ಯಾವ ಉದ್ದೇಶಕ್ಕಾಗಿ ಪಡೆಯಲಾಗುತ್ತಿದೆ ;

(ಈ) ವಿಶ್ವಬ್ಯಾಂಕ್‌ನಿಂದ ಪಡೆಯಲಾಗುತ್ತಿರುವ ಸಲದ ಮೊತ್ತದಲ್ಲಿ ಯಾವ ಮಾದರಿಯ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುತ್ತದೆ ;

(ಉ) ಯೋಜನೆಯ ಒಟ್ಟು ಮೊತ್ತದ ಶೇ.೪೫ರಷ್ಟು ಅನುದಾನವನ್ನು ಪಾವತಿ ಮಾಡುತ್ತಿರುವ ರಾಜ್ಯ ಸರ್ಕಾರಕ್ಕೆ ವಿಶ್ವಬ್ಯಾಂಕಿನ ನೆರವು ಅಗತ್ಯವಿತ್ತೇ ?

## ಕರ್ನಾಟಕ ಡಾಟಾ ಸೆಂಟರ್ ಮೂಲಕ ನೀಡಲಾಗುತ್ತಿರುವ ಸೇವೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೦ (೧೫೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಡಾಟಾ ಸೆಂಟರ್ ಮೂಲಕ ಯಾವ್ಯಾವ ಇಲಾಖೆಗಳಿಗೆ ಮಾಹಿತಿ ಮತ್ತು ತಂತ್ರಜ್ಞಾನ ಸಂಬಂಧಿತ ಸೇವೆಗಳನ್ನು ನೀಡಲಾಗುತ್ತಿದೆ ; ಈಗಾಗಲೇ ರಾಜ್ಯದ ವಿವಿಧ ಇಲಾಖೆಗಳಿಗೆ ಡಾಟಾ ಸೆಂಟರ್ ಮೂಲಕ ನೀಡಲಾಗುತ್ತಿರುವ ಸೇವೆಗಳ ಗುಣಮಟ್ಟ ಸಾಮರ್ಥ್ಯ ವೇಗ ಮತ್ತು ಹೆಚ್ಚು ಒತ್ತಡವನ್ನು ತಡೆದುಕೊಳ್ಳುವ ಕುರಿತಂತೆ ಹೇಗೆ ಕ್ರಮವಹಿಸಲಾಗುತ್ತಿದೆ ;

(ಆ) ವಿವಿಧ ಇಲಾಖೆಗಳಲ್ಲಿ ಆನ್‌ಲೈನ್ ಮೂಲಕ ನೀಡಲಾಗುತ್ತಿರುವ ಸೇವೆಗಳಲ್ಲಿ ಅತೀ ಹೆಚ್ಚು ಜನರು ಸೇವೆಗಳಿಗೆ ಲಾಗಿನ್ ಆದಾಗ ತಂತ್ರಾಂಶಗಳು ಒತ್ತಡ ಸಹಿಸಲು ಸಾಧ್ಯವಾಗದೆ ಹಲವಾರು ಸಾರ್ವಜನಿಕರು ಸೇವೆ ಪಡೆಯುವಲ್ಲಿ ತೊಂದರೆಗೀಡಾಗುತ್ತಿರುವುದರ ಬಗ್ಗೆ ಇವುಗಳ ಸಾಮರ್ಥ್ಯವನ್ನು ಹೆಚ್ಚಿಸಲು ಕೈಗೊಂಡ ಕ್ರಮಗಳೇನು ;

(ಇ) ಈ ಕುರಿತಂತೆ ಕಳೆದ ಮೂರು ವರ್ಷಗಳಲ್ಲಿ ಯಾವ್ಯಾವ ಇಲಾಖೆಗಳಿಂದ ಎಷ್ಟು ದೂರುಗಳನ್ನು ಮತ್ತು ಸರ್ವರ್ ಸಾರ್ಮರ್ಥ್ಯವನ್ನು ಹೆಚ್ಚಿಸುವಂತೆ ಮನವಿ ಸಲ್ಲಿಕೆಯಾಗಿವೆ ; ಅವುಗಳಲ್ಲಿ ಎಷ್ಟನ್ನು ಪರಿಗಣಿಸಿ ಸೂಕ್ತ ಕ್ರಮ ವಹಿಸಿದೆ ;

(ಈ) ಮುಂದಿನ ದಿನಗಳಲ್ಲಿ ಹೆಚ್ಚು ಸಾರ್ವಜನಿಕ ಸೇವೆಗಳ ಒತ್ತಡವಿರುವ ಇಲಾಖೆಗಳ ಅಂತರ್ಜಾಲ ಸೇವೆಗಳ ಮತ್ತು ಸರ್ವರ್‌ಗಳ ಸಾಮರ್ಥ್ಯವನ್ನು ಹೆಚ್ಚಿಸುವ, ಸುಧಾರಿಸುವ ಮತ್ತು ಗುಣಮಟ್ಟ ಉತ್ತಮಪಡಿಸುವ ಬಗ್ಗೆ ಯಾವ ರೀತಿಯ ಕಾರ್ಯತಂತ್ರವನ್ನು ರೂಪಿಸಿದೆ ? (ವಿವರ ನೀಡುವುದು)

## ಭಿಕ್ಷಾಟನೆ ನಿರ್ಮೂಲನಾ ಕಾರ್ಯಕ್ರಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೧ (೧೫೬೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ರೀತಿಯ ಭಿಕ್ಷಾಟನೆಯನ್ನು ಹೋಲುವ ಅಸುರಕ್ಷಿತವಾದ ಕಡಿಮೆ ಮತ್ತು ಖಚಿತ ಆದಾಯವಿಲ್ಲದ ಚಟುವಟಿಕೆಗಳನ್ನು ನಿರ್ವಹಿಸುತ್ತಾ ಜೀವಿಸುತ್ತಿರುವ ಅಲೆಮಾರಿ ಸಮುದಾಯಗಳ ಅಭ್ಯುದಯಕ್ಕಾಗಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ಈ ಕುರಿತ ಸಮೀಕ್ಷಾ ವರದಿ ಸಹಿತ ವಿವರ ನೀಡುವುದು)

(ಆ) ಸರ್ಕಾರದ ಅಧಿಸೂಚನೆ ಸಂಖ್ಯೆ: ಎಸ್.ಡಬ್ಲ್ಯುಡಿ:೧೫:ಎಸ್.ಬಿ.ಆರ್:೯೭ ದಿನಾಂಕ:೨೮–೦೮–೧೯೯೭ ರಲ್ಲಿ ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ ೧೯೭೫ ರ ಕಾಯಿದೆಯನ್ನು ದಿನಾಂಕ:೨೮–೦೮–೧೯೯೭ ರಿಂದ ಜಾರಿಗೆ ಬರುವಂತೆ, ರಾಜ್ಯದಾದ್ಯಂತ ವಿಸ್ತರಿಸಿದ್ದರೂ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹೆಚ್ಚಿನ ನಗರ ಪ್ರದೇಶಗಳಲ್ಲಿ ಮತ್ತು ಧಾರ್ಮಿಕ ಕೇಂದ್ರ ಮತ್ತು ಹಲವು ಜಾತ್ರೆಗಳಲ್ಲಿ ಹಲವಾರು ನಿರಾಶ್ರಿತರು ಮತ್ತು ಭಿಕ್ಷುಕರು ಭಿಕ್ಷೆಬೇಡುತ್ತಿರುವ ಬಗ್ಗೆ ಸರ್ಕಾರ ಏನು ಕ್ರಮವಹಿಸುತ್ತಿದೆ ; (ವಿವರ ನೀಡುವುದು)

(ಇ) ಕೇಂದ್ರ ಪರಿಹಾರ ಸಮಿತಿಗೆ ರಾಜ್ಯದ ಸ್ಥಳೀಯ ಸಂಸ್ಥೆಗಳಿಂದ ಮತ್ತು ಇತರ ಮೂಲಗಳಿಂದ ಸಂಗ್ರಹವಾಗುವ ಮೊತ್ತವೆಷ್ಟು; (ಕಳೆದ ಮೂರು ವರ್ಷಗಳ ವಿವರ ನೀಡುವುದು)

(ಈ) ಸಮಾಜ ಕಲ್ಯಾಣ ಇಲಾಖೆ ಕೇಂದ್ರ ಪರಿಹಾರ ಸಮಿತಿಯ ಮೂಲಕ ಕರ್ನಾಟಕ ರಾಜ್ಯದಲ್ಲಿ ಭಿಕ್ಷಾಟನೆ ನಿಯಂತ್ರಿಸಲು ಮತ್ತು ಅಂತಿಮವಾಗಿ ನಿರ್ಮೂಲನೆಗೊಳಿಸಲು ನಿರಂತರವಾಗಿ ಕೈಗೊಂಡ ಕಾರ್ಯಕ್ರಮಗಳೇನು ; ಇಲ್ಲಿಯವರೆಗೆ ಎಷ್ಟು ಭಿಕ್ಷುಕರನ್ನು ಮುಖ್ಯವಾಹಿನಿಗೆ ತರಲಾಗಿದೆ ; ಈ ಸಮುದಾಯವನ್ನೇ ನಿರ್ಧಿಷ್ಟವಾಗಿ ಗುರಿಯಾಗಿರಿಸಿ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಿದೆ ?

## ಸಾಮಾಜಿಕವಾಗಿ ಇತರ ಹಿಂದುಳಿದ ವರ್ಗಗಳ ಆದಾಯಮಿತಿಯನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೨ (೧೫೭೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ವಿದ್ಯಾರ್ಥಿಗಳು ಇಂಜಿನಿಯರಿಂಗ್ ಕಾಲೇಜು ಸಹಿತ ಮತ್ತು ಇತರ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ ; ಅವರಲ್ಲಿ ಎಷ್ಟು ಜನ ಹಿಂದುಳಿದ ವರ್ಗಗಳ ಇಲಾಖೆಯುಲ್ಲಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಿರುತ್ತಾರೆ ; ಎಷ್ಟು ಅರ್ಜಿಗಳು ಸ್ವೀಕೃತವಾಗಿ ವಿದ್ಯಾರ್ಥಿವೇತನ ಮಂಜೂರಾಗಿದೆ ; ತಿರಸ್ಕೃತವಾದ ಅರ್ಜಿಗಳ ಸಂಖ್ಯೆಯೆಷ್ಟು; ತಿರಸ್ಕರಿಸಲು ಕಾರಣವೇನು ; (ಕಳೆದ ೨ ವರ್ಷಗಳ ವಿವರ ನೀಡುವುದು)

(ಆ) ಕರ್ನಾಟಕ ರಾಜ್ಯದಲ್ಲಿ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದ ಸಮುದಾಯಗಳಿಗೆ ಶಿಕ್ಷಣ, ಆರ್ಥಿಕ ಹಾಗೂ ಇನ್ನಿತರ ಸೌಲಭ್ಯಗಳಿಗೆ ಆಯ್ಕೆ ಮಾಡುವಾಗ ಪರಿಗಣಿಸುವ ಆದಾಯಮಿತಿಯೆಷ್ಟು ; ಅದನ್ನು ಯಾವಾಗ ನಿರ್ಧರಿಸಲಾಗಿತ್ತು ;

(ಇ) ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮತ್ತು ಇತರ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ೧.೨೦ ಲಕ್ಷ ರೂಪಾಯಿ ಆದಾಯಮಿತಿಯನ್ನು ನಿಗದಿಪಡಿಸಿದ್ದು ಇದರಿಂದಾಗಿ ಅನೇಕ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪ್ರಸ್ತುತ ಆರ್ಥಿಕ ವ್ಯವಸ್ಥೆ ಬದಲಾದ ಸನ್ನಿವೇಶದಲ್ಲಿ ಕೆಲವು ವರ್ಗಗಳ ಜನರು ಉನ್ನತ ಶಿಕ್ಷಣ ಇತ್ಯಾದಿಗಳಿಗೆ ಹೋಗುತ್ತಿದ್ದು ಸರ್ಕಾರ ನಿಗದಿಪಡಿಸಿದ ಆದಾಯಮಿತಿ ಕಡಿಮೆಯಿದ್ದು ಹಲವಾರು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಅರ್ಜಿ ಸಲ್ಲಿಸಲು ಸಾಧ್ಯವಾಗದಿರುವ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕರ್ನಾಟಕ ರಾಜ್ಯದಲ್ಲಿ ಕೃಷಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೩ (೧೫೭೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇವಸ್ಥಾನ, ಮಠ ವಿವಿಧ ಧಾರ್ಮಿಕ ಸಂಸ್ಥೆಗಳು ಅವಿಭಕ್ತ ಕುಟುಂಬಗಳು ಸಹಕಾರಿ ಹಾಗೂ ಸರಕಾರಿ ಸಂಸ್ಥೆಗಳು ಹೊಂದಿರುವ ಕೃಷಿ ಮಾಡಬಹುದಾದ ಖಾಲಿ ಜಮೀನನ್ನು ಸ್ವಂತ ಕೃಷಿ ಅಥವಾ ಗುತ್ತಿಗೆ ಕೃಷಿ ಮೂಲಕ ವಿಸ್ತರಿಸಲು ಸರ್ಕಾರ ಮುಂದಾಗಿದೆಯೇ ; ಈ ಕುರಿತು ಇರುವ ಅವಕಾಶಗಳನ್ನು ಉಪಯೋಗಿಸಿಕೊಳ್ಳಲಾಗಿದೆಯೇ ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೃಷಿಗೆ ಪೂರಕವಾಗಿ ಏಕ ಗವಾಕ್ಷಿ ಮೂಲಕ ಇಲಾಖೆವಾರು ಮೂಲ ಸೌಲಭ್ಯಗಳು ದೊರೆಯುವಂತೆ ತನ್ನ ವಿಸ್ತರಣಾ ಚಟುವಟಿಕೆಗಳನ್ನು ಹೇಗೆ ಕೈಗೊಳ್ಳುತ್ತಿದೆ ;

(ಇ) ಜಿಲ್ಲಾವಾರು ಮಳೆ ಆಧಾರಿತ ಕೃಷಿಗೆ ಮಳೆ ಅಂಕಿ ಅಂಶಗಳನ್ನು ಬೆಳೆ ಸಮೀಕ್ಷೆಯಲ್ಲಿ ಅಳವಡಿಸಿ ನಿಗದಿತ ಪ್ರತಿಶತಕ್ಕಿಂತ ಕಡಿಮೆ ಬೆಳೆ ಇರುವ ಜಾಗಗಳ ಮಾಲೀಕರಿಗೆ ತಿಳುವಳಿಕೆ ಮತ್ತು ಉತ್ತೇಜನ ನೀಡುವ ಮೂಲಕ ಅಂತಿಮವಾಗಿ ಅತೀ ಹೆಚ್ಚು ಕೃಷಿ ಜಾಗವನ್ನು ಕೃಷಿ ಬೆಳೆಗಳ ವ್ಯಾಪ್ತಿಗೆ ತರುವ ಕುರಿತು ಸರ್ಕಾರ ಯಾವ ಕಾರ್ಯತಂತ್ರಗಳನ್ನು ರೂಪಿಸಿದೆ ;

(ಈ) ರಾಜ್ಯದ ಜಿಲ್ಲೆಗಳಲ್ಲಿ ಬೆಳೆಯುವ ಹಾಗೂ ಬಳಸುವ ಆಹಾರ ಧಾನ್ಯಗಳ ಪ್ರಮಾಣ ಎಷ್ಟು ; ಪ್ರತಿ ಜಿಲ್ಲೆಗಳಲ್ಲಿ ಅತೀ ಹೆಚ್ಚು ಕೊರತೆಯಿರುವ ಆಹಾರ ಧಾನ್ಯಗಳಾವುವು ;

(ಉ) ಆಯಾಯ ಜಿಲ್ಲೆಗಳಲ್ಲಿ ಉಪಯೋಗಿಸುವ ಮುಖ್ಯ ಆಹಾರ ಧಾನ್ಯಗಳ ಜಿಲ್ಲಾವಾರು ಬೇಡಿಕೆಯ ಶೇಕಡ ಐವತ್ತರಷ್ಟನ್ನಾದರೂ ಆಯಾಯ ಜಿಲ್ಲೆಗಳಲ್ಲಿ ಬೆಳೆಯುವುದು ಆಹಾರ ಸುರಕ್ಷತೆಗೆ ಅಗತ್ಯವೆಂದು ಸರ್ಕಾರ ಪರಿಗಣಿಸಿದೆಯೇ ?

## ಗ್ರಾಮ ಪಂಚಾಯಿತಿಗಳ ಜಲ ಜೀವನ್ ಕಾಮಗಾರಿಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೪ (೧೫೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಜೆಜೆಎಮ್ ಯೋಜನೆಯಡಿ ಕೈಗೊಂಡ ಕಾಮಗಾರಿಗಳೆಷ್ಟು; ಕುಡಿಯುವ ನೀರಿನ ಮೂಲಗಳಾದ ಕೊಳವೆ ಬಾವಿ ಮತ್ತು ನದಿಯಾಧಾರಿತ ಸಮಾನಾಂತರ ಜಲಮೂಲ ಮೂಲಕ ಎಷ್ಟು ಮನೆಗಳಿಗೆ ಕುಡಿಯುವ ನೀರು ಒದಗಿಸಲಾಗಿದೆ ; ಕೆಲ ಜಿಲ್ಲೆಗಳಲ್ಲಿ ಏಕಗ್ರಾಮ, ಬಹುಗ್ರಾಮ ಯೋಜನೆಗಳು ಪೂರ್ಣವಾಗದಿದ್ದರೂ ಟ್ಯಾಂಕುಗಳನ್ನು ನಿರ್ಮಿಸಿ ನೀರು ಸಂಗ್ರಹಿಸಿದ ಪ್ರಕರಣಗಳೆಷ್ಟು ; ಇಂತಹ ಟ್ಯಾಂಕುಗಳ ಬಾಳಿಕೆ ಮತ್ತು ಸುರಕ್ಷತೆಗೆ ಏನು ಕ್ರಮವಹಿಸಲಾಗಿದೆ ;

(ಆ) ಜೆಜೆಎಮ್ ಯೋಜನೆಯ ನೀರು ಸ್ಥಾವರ, ಟ್ಯಾಂಕುಗಳು, ಪೈಪ್ ಲೈನ್ ಇತ್ಯಾದಿ ತಾಂತ್ರಿಕ ವ್ಯವಸ್ಥೆಯನ್ನೊಳಗೊಂಡ ಆಸ್ತಿಗಳನ್ನು ಗುಣಮಟ್ಟವನ್ನು ಖಾತ್ರಿಪಡಿಸಿ ಹಸ್ತಾಂತರ ನೀಡಲು ಮತ್ತು ಪಡೆಯಲು ಸಕ್ಷಮ ಪ್ರಾಧಿಕಾರಗಳು ಯಾರು ; ಗ್ರಾಮ ಪಂಚಾಯತಿಗಳು ಕುಡಿಯುವ ನೀರಿನ ವ್ಯವಸ್ಥೆಯನ್ನು ನಿರ್ವಹಿಸಲು ತಾಂತ್ರಿಕ ಪರಿಣಿತಿ ಮತ್ತು ಸಂಪನ್ಮೂಲವನ್ನು ಯಾವ ರೀತಿ ಖಾತರಿಪಡಿಸಿದೆ ;

(ಇ) ಜೆಜೆಎಮ್ ಯೋಜನೆಯಡಿ ಕಾಮಗಾರಿಗಳನ್ನು ನಿರ್ವಹಿಸುವಾಗ ವಿವಿಧ ರಸ್ತೆಗಳನ್ನು, ರಸ್ತೆ ಬದಿ, ಚರಂಡಿಗಳನ್ನು ಕಡಿತ ಮಾಡಿದ್ದನ್ನು ಸರಿಮಾಡಿದೆಯೇ ; ಮಾಡಿದ್ದಲ್ಲಿ ರಾಷ್ಟ್ರೀಯ ಹೆದ್ದಾರಿ. ಲೋಕೋಪಯೋಗಿ, ಮತ್ತು ಜಿಲ್ಲಾ ಪಂಚಾಯತಿ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳಿಂದ ದೃಢೀಕರಣ ಪಡೆಯಲಾಗಿದೆಯೇ ; (ಜಿಲ್ಲಾವಾರು ಕ್ರೂಢೀಕೃತ ಮಾಹಿತಿ ನೀಡುವುದು)

(ಈ) ಕರ್ನಾಟಕ ರಾಜ್ಯದಲ್ಲಿ ಕುಡಿಯುವ ನೀರಿನ ಪೂರೈಕೆಯ ಜಲಜೀವನ್ (ಜೆಜೆಎಮ್), ಏಕಗ್ರಾಮ, ಬಹುಗ್ರಾಮ ಯೋಜನೆಗಳನ್ನು ಪೂರ್ಣ ಪ್ರಮಾಣದಲ್ಲಿ ಯಾವಾಗ ಮುಕ್ತಾಯಗೊಳಿಸಲಾಗುವುದು ?

## ವಿಕಲಚೇನತರ ವ್ಯಕ್ತಿಗಳಿಗೆ ಸಾಧನ ಸಲಕರಣೆಗಳನ್ನು ಖರೀದಿಸಲು ಅವಕಾಶ ನೀಡುವ ಬಗ್ಗೆ

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೫ (೧೬೦೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಕಲಚೇತನ ವ್ಯಕ್ತಿಗಳಿಗೆ ಸಹಾಯ ಮಾಡಲು ವಿಕಲಚೇತನರ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳಿವೆ ; ಇದಕ್ಕಾಗಿ ಎಷ್ಟು ಹಣ ಮೀಸಲಿಡಲಾಗಿದೆ ;

(ಆ) ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ೨೦೧೬ರ ಕಾಯ್ದೆಯ ನಿಯಮ ೧೬ರ ಪ್ರಕಾರ ೨೧ ಬಗೆಯ ವಿಕಲಚೇತನ ವ್ಯಕ್ತಿಗಳಿಗೆ ಸಹಾಯ ಮಾಡುವ ಅವಕಾಶ ಇರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಕೇವಲ ಮೂರು ಬಗೆಯ ಅಂಗವಿಕಲತೆಯುಳ್ಳ ವ್ಯಕ್ತಿಗಳನ್ನು ಹೊರತುಪಡಿಸಿ ಉಳಿದ ೧೮ ಬಗೆಯ ವಿಕಲಚೇತನರಿಗೆ ಈ ಸೌಲಭ್ಯ ನೀಡದಿರಲು ಕಾರಣವೇನು ; ಹಾಲಿ ಇರುವ ಮಾರ್ಗ ಸೂಚಿಗಳನ್ನು ಪರಿಷ್ಕರಿಸಿ ಇವರಿಗೂ ಸೌಲಭ್ಯಗಳನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಈ ತಾರತಮ್ಯವನ್ನು ತಪ್ಪಿಸಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಹೊರಡಿಸಿರುವ ಮಾರ್ಗಸೂಚಿಯನ್ನು ಪರಿಷ್ಕರಿಸಿ ಎಲ್ಲಾ ೨೧ ಬಗೆಯ ವಿಕಲಚೇತನ ವ್ಯಕ್ತಿಗಳಿಗೂ ಎಲ್ಲಾ ರೀತಿಯ ಸೌಲಭ್ಯಗಳು ಸಿಗುವಂತೆ ಕೂಡಲೇ ಆದೇಶ ಹೊರಡಿಸಲಾಗುವುದೇ ?

## ಆಡಳಿತದಲ್ಲಿ ಕನ್ನಡ ಬಳಕೆ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೬ (೧೬೦೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕನ್ನಡ ಆಡಳಿತ ಭಾಷೆಯಾಗಿ ಹಲವಾರು ವರ್ಷಗಳ ಹಿಂದೆಯೇ ಜಾರಿಗೆ ಬಂದಿದ್ದು, ಇದರ ಅನುಷ್ಠಾನ ಎಲ್ಲಾ ಇಲಾಖೆಗಳಲ್ಲಿ ಆಗುತ್ತಿದೆಯೇ ;

(ಆ) ಕಛೇರಿಗಳಲ್ಲಿ ಟಿಪ್ಪಣಿಗಳನ್ನು ಬರೆಯಲು ಸಹಾಯಕವಾಗುವಂತ ಆಡಳಿತ ಶಬ್ದಕೋಶ, ಮಾದರಿ ಪತ್ರಗಳು, ಕಛೇರಿ ಕೈಪಿಡಿ ಮುಂತಾದ ಪುಸ್ತಕಗಳನ್ನು ಎಲ್ಲಾ ಇಲಾಖೆಗಳಿಗೆ ಸರಬರಾಜು ಮಾಡಲಾಗಿದೆಯೇ ಅಥವಾ ಯಾವ ರೀತಿಯ ಪುಸ್ತಕ ಮತ್ತು ಪರಿಕರಗಳನ್ನು ನೀಡಲಾಗಿದೆ ;

(ಇ) ಕನ್ನಡ ಅಭಿವೃದ್ಧಿ ಪ್ರಾಧಿಕಾರದವರು ಕಳೆದ ಎರಡು ವರ್ಷಗಳಲ್ಲಿ ಎಷ್ಟು ಕಛೇರಿಗಳಿಗೆ ಭೇಟಿ ನೀಡಿ ಆಡಳಿತದಲ್ಲಿ ಕನ್ನಡ ಬಳಕೆಯಾಗುತ್ತಿದೆಯೇ ಎಂಬ ಬಗ್ಗೆ ತಪಾಸಣೆ ಮಾಡಿದ್ದಾರೆ; ಏನು ವರದಿ ನೀಡಿದ್ದಾರೆ; ಈ ಬಗ್ಗೆ ಯಾವ ಶಿಫಾರಸ್ಸುಗಳನ್ನು ಮಾಡಲಾಗಿದೆ ;

(ಈ) ಕನ್ನಡವನ್ನು ಬಳಸದ ಎಷ್ಟು ಅಧಿಕಾರಿ ಮತ್ತು ನೌಕರರ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)

## ಹಿರಿಯ ನಾಗರೀಕರ ಸಬಲೀಕರಣಕ್ಕಾಗಿ ಇರುವ ಯೋಜನೆಗಳು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೭ (೧೬೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿರಿಯು ನಾಗರೀಕರ ಸಬಲೀಕರಣಕ್ಕಾಗಿ ಇಲಾಖೆಯಲ್ಲಿ ಹಾಕಿಕೊಂಡಿರುವ ಯೋಜನೆಗಳು ಯಾವುವು ;

(ಆ) ಆಸರೆ ಇಲ್ಲದೆ ಸಂಕಷ್ಟದಲ್ಲಿರುವ ಹಿರಿಯ ನಾಗರೀಕರಿಗಾಗಿ ಸಹಾಯ ಮಾಡಲು ಇರುವ ಕಾರ್ಯಕ್ರಮಗಳೇನು ; ಇದುವರೆಗೆ ಎಷ್ಟು ಜನರು ಇದರ ಸಹಾಯ ಪಡೆದಿದ್ದಾರೆ ; ಯಾವ ರೀತಿಯಲ್ಲಿ ಸಹಾಯ ಪಡೆದಿದ್ದಾರೆ ;

(ಇ) ಸಂಧ್ಯಾ ಸುರಕ್ಷಾ ಯೋಜನೆಯಡಿ ಎಷ್ಟು ಜನ ವಯೋವೃದ್ಧರಿಗೆ ಮಾಸಾಶನ ನೀಡಲಾಗಿದೆ ? (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)

## ಬಾಲ ಕಾರ್ಮಿಕರ ನಿರ್ಮೂಲನೆಗಾಗಿ ಯೋಜನೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೮ (೧೬೦೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೋಟೆಲ್‌ಗಳು ಮುಂತಾದ ಕಡೆಗಳಲ್ಲಿ ಬಾಲ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಬಾರದು ಎಂಬ ನಿಯಮ ಜಾರಿಯಲ್ಲಿದೆಯೇ ;

(ಆ) ಅನೇಕ ಹೋಟೆಲ್‌ಗಳು ಮತ್ತಿತರ ಸ್ಥಳಗಳಲ್ಲಿ ಈಗಲೂ ಬಾಲ ಕರ್ಮಿಕರನ್ನು ನೇಮಿಸಿಕೊಂಡು ಕೆಲಸ ಮಾಡಿಸುತ್ತಿದ್ದು, ಎಷ್ಟು ಕಡೆಗಳಲ್ಲಿ ಅಧಿಕಾರಿಗಳು ತಪಾಸಣೆ ಮಾಡಿ ಕ್ರಮ ಕೈಗೊಂಡಿದ್ದಾರೆ ; (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

(ಇ) ಬಾಲ ಕಾರ್ಮಿಕರ ರಕ್ಷಣೆಗಾಗಿ ಯಾವ ಯಾವ ಯೋಜನೆಗಳಿವೆ ; ಇದರ ಅನುಷ್ಠಾನ ಸಮರ್ಪಕವಾಗಿ ನಡೆಯುತ್ತಿದೆಯೇ ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಬಾಲ ಕಾರ್ಮಿಕರನ್ನು ರಕ್ಷಣೆ ಮಾಡಿ ಸಹಾಯ ಮಾಡಲಾಗಿದೆ ? (ವಿವರ ನೀಡುವುದು)

## ಹಿಂದುಳಿದ ವರ್ಗದವರಿಗೆ ಯೋಜನೆಗಳ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೯ (೧೬೦೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳಿಗೆ ಸಹಾಯ ಮಾಡಲು ಇರುವ ಯೋಜನೆಗಳು ಯಾವುವು ;

(ಆ) ಸ್ವಯಂ ಉದ್ಯೋಗಕ್ಕಾಗಿ ಯಾವ ಯಾವ ಸಾಲಗಳನ್ನು ನೀಡಲಾಗುತ್ತಿದೆ ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಫಲಾನುಭವಿಗಳು ಸಹಾಯ ಪಡೆದಿದ್ದಾರೆ ; ಯಾವ ಯಾವ

ಸ್ವಯಂ ಉದ್ಯೋಗಗಳಿಗೆ ಸಾಲ ಸೌಲಭ್ಯ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಯುವ ಜನರಿಗಾಗಿ ಇರುವ ವಿಶೇಷ ಯೋಜನೆಗಳು ಯಾವುವು ; ಯಾವ ಸೌಲಭ್ಯಗಳನ್ನು ನೀಡಲಾಗಿದೆ ; ಎಷ್ಟು ಮೊತ್ತವನ್ನು ಇದಕ್ಕಾಗಿ ಮೀಸಲಿಡಲಾಗಿದೆ ?

## KRIDL ಸಂಸ್ಥೆಯಿಂದ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೦ (೧೫೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:20.05.2023 ರಿಂದ ಇದುವರೆವಿಗೂ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ಇಲಾಖೆಗಳಿಂದ ಕರ್ನಾಟಕ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ (ಕೆ.ಆರ್.ಐ.ಡಿ.ಎಲ್) ದಿಂದ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ಇಲಾಖಾವಾರು ಕಾಮಗಾರಿಗಳ ವಿವರಗಳನ್ನು ನೀಡುವುದು)

(ಆ) ಈ ಎಲ್ಲಾ ಕಾಮಗಾರಿಗಳಿಗೆ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆಯೇ ; ಹಾಗಿದ್ದಲ್ಲಿ, ಆಡಳಿತಾತ್ಮಕ ಅನುಮೋದನೆಯ ಆದೇಶಗಳ ಪ್ರತಿಗಳನ್ನು ನೀಡುವುದು ;

(ಇ) ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವಾಗ ಸ್ಥಳೀಯ ಆಡಳಿತ, ಶಿಷ್ಠಾಚಾರವನ್ನು ಪಾಲನೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಈ ಎಲ್ಲಾ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಸಂದರ್ಭದಲ್ಲಿ ಮುದ್ರಿಸುವ ಆಹ್ವಾನ ಪತ್ರಿಕೆಗಳ ಪ್ರತಿಗಳನ್ನು ನೀಡುವುದು ;

(ಈ) ಹಾಗಿಲ್ಲದಿದ್ದಲ್ಲಿ, ಶಿಷ್ಠಾಚಾರವನ್ನು ಉಲ್ಲಂಘನೆ ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಇಲಾಖಾವಾರು ವಿವರಗಳನ್ನು ನೀಡುವುದು)

## ಆರ್.ಡಿ.ಪಿ.ಆರ್. ಇಲಾಖೆ ಅನುದಾನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೧ (೧೫೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೦೨ ವರ್ಷಗಳಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

(ಆ) ಹೊಸಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ;

(ಇ) ಹಾಗಿದ್ದಲ್ಲಿ, ಪೂರ್ಣಗೊಂಡಿರುವ ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ?

## ಕಾರ್ಮಿಕರ ಮಕ್ಕಳಿಗೆ ದೊರೆಯುತ್ತಿರುವ ಸ್ಕಾಲರ್‌ಶಿಪ್ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೨ (೧೫೬೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಸಿಗುತ್ತಿರುವ ಸ್ಕಾಲರ್‌ಶಿಪ್ ಹಣದ ವಿವರಗಳೇನು ; ಸದರಿ ಸ್ಕಾಲರ್‌ಶಿಪ್ ಹಣದ ಮೊತ್ತವನ್ನು ೨೦೨೪–೨೫ನೇ ಸಾಲಿನವರೆಗೂ ಈಗಾಗಲೇ ಪೂರ್ತಿಯಾಗಿ ಪಾವತಿಸಲಾಗಿದೆಯೇ ;

(ಆ) ೨೦೨೨–೨೩ನೇ ಸಾಲಿನಲ್ಲಿ ಕಡಿತಗೊಳಿಸಲಾಗಿದ್ದ ಸ್ಕಾಲರ್‌ಶಿಪ್ ಮೊತ್ತದ ಬಾಕಿ ಉಳಿಕೆ ಹಣವನ್ನು ಪಾವತಿಸುವಂತೆ ಹೈಕೋರ್ಟ್ ಆದೇಶಿಸಿದೆಯೇ ; ಆದೇಶಿಸಿದ್ದಲ್ಲಿ, ಸದರಿ ಬಾಕಿ ಮೊತ್ತವನ್ನು ಈಗಾಗಲೇ ಪಾವತಿಸಲಾಗಿದೆಯೇ ;

(ಇ) ಇದುವರೆವಿಗೂ ಸದರಿ ಬಾಕಿ ಮೊತ್ತವನ್ನು ಪಾವತಿಸದಿದ್ದಲ್ಲಿ ಅದಕ್ಕೆ ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಈ ಬಾಕಿ ಹಣವನ್ನು ಪಾವತಿಸಲಾಗುವುದು ?

## ಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೩ (೧೫೬೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ಹಾಗೂ ರೂಪಿಸಿರುವ ಕಾರ್ಯಕ್ರಮ ಮತ್ತು ಯೋಜನೆಗಳೇನು ;

(ಆ) ಕಾರ್ಮಿಕರು ತಮ್ಮ ಸ್ವಂತ ನಿವೇಶನಗಳಲ್ಲಿ ನಿರ್ಮಿಸುವ ಮನೆಗಳಿಗೆ ಸಹಾಯಧನ ನೀಡುವಂತೆ ಬಹುಕಾಲದಿಂದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸದರಿ ಬೇಡಿಕೆಯನ್ನು ಈಡೇರಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮ ವಹಿಸುವುದೇ ?

## ಕುಡುಬಿ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೪ (೧೫೬೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅವಿಭಾಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ 'ಕುಡುಬಿ' ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 'ಕುಡುಂಬನ್' ಎಂದು ತಪ್ಪಾಗಿ ಹೆಸರು ಉಲ್ಲೇಖಿಸಿದ ಪರಿಣಾಮ ಕಳೆದ ೭೦ ವರ್ಷಗಳಿಂದ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸುಮಾರು ೧.೨೫ ಲಕ್ಷ ಮಂದಿ 'ಕುಡುಬಿ' ಸಮುದಾಯದ ಜನರಿಗೆ ಸರ್ಕಾರದ ಸವಲತ್ತುಗಳು ಸಿಗದೇ ಇಂದಿಗೂ ವಂಚಿತರಾಗುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, 'ಕುಡುಬಿ' ಜನಾಂಗದ ಕುಲಶಾಸ್ತ್ರೀಯ ಅಧ್ಯಯನದ ವರದಿ ೨೦೦೮ ರಲ್ಲಿ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದು, ಅದರಲ್ಲಿ 'ಕುಡುಬಿ' ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವಂತೆ ಈಗಾಗಲೇ ಶಿಫಾರಸ್ಸು ಮಾಡಲಾಗಿದ್ದರೂ ಸಹ ಸರ್ಕಾರ ಇದುವರೆಗೆ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ 'ಕುಡುಬಿ' ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸಲಾಗುವುದು ?

## ಕೇರಳ ಸರ್ಕಾರದ ಕನ್ನಡ ವಿರೋಧಿ ಧೋರಣೆ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೫ (೧೫೬೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೆರೆ ರಾಜ್ಯವಾದ ಕೇರಳ ಸರ್ಕಾರ ಕನ್ನಡ ವಿರೋಧಿ ಧೋರಣೆಯನ್ನು ಮುಂದುವರೆಸಿದ್ದು, ಗಡಿನಾಡಾಗಿರುವ

ಹಿನ್ನೆಲೆಯಲ್ಲಿ ಕಾಸರಗೋಡು ಕನ್ನಡಿಗರಿಗೆ ಈವರೆಗೆ ಸಿಗುತ್ತಿದ್ದ ಸೌಲಭ್ಯಗಳು ಹಾಗೂ ಉದ್ಯೋಗಗಳನ್ನು ಕಸಿದುಕೊಂಡು ಅವರನ್ನು ಸಂಕಷ್ಟಕ್ಕೆ ದೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ಗಡಿನಾಡ ಕನ್ನಡಿಗರ ಮೂಲಭೂತ ಹಕ್ಕಿಗೆ ತೊಂದರೆ ಕೊಡುವ ದುಸ್ಸಾಹಸಕ್ಕೆ ಇಳಿದಿರುವ ಕೇರಳ ಸರ್ಕಾರಕ್ಕೆ ತನ್ನ ವಿರೋಧ, ಪ್ರತಿಭಟನೆ ಸೂಚಿಸುವುದರ ಜೊತೆಗೆ ಗಡಿನಾಡ ಕನ್ನಡಿಗರ ಹಿತರಕ್ಷಣೆಯ ಹೊಣೆಗಾರಿಕೆ ತನ್ನ ಆಧ್ಯಾ ಕರ್ತವ್ಯ ಎಂಬ ಸ್ಪಷ್ಟ ನಿಲುವು ತಿಳಿಸಲು ಸರ್ಕಾರ ಇದುವರೆಗೆ ಏನು ಕ್ರಮ ವಹಿಸಿದೆ ;

(ಇ) ಯಾವ ಕಾಲಮಿತಿಯೊಳಗೆ ಗಡಿನಾಡ ಕನ್ನಡಿಗರ ರಕ್ಷಣೆ ಹಾಗೂ ಅವರಿಗೆ ನ್ಯಾಯಯುತವಾಗಿ ಸಿಗಬೇಕಾಗಿರುವ ಸೌಲಭ್ಯ ಹಾಗೂ ಉದ್ಯೋಗಗಳನ್ನು ದೊರಕಿಸಿಕೊಡಲು ಸರ್ಕಾರ ಅಗತ್ಯ ಹಾಗೂ ತ್ವರಿತ ಕ್ರಮ ವಹಿಸುವುದು ?

## ಕಾರ್ಮಿಕರಿಗೆ ಸಿಗುತ್ತಿರುವ ಚಿಕಿತ್ಸೆ ವೆಚ್ಚಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೬ (೧೫೬೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕಾರ್ಮಿಕರಿಗೆ ನೀಡಲಾಗುತ್ತಿರುವ ವೈದ್ಯಕೀಯ ಸಹಾಯಧನ, ಪ್ರಮುಖ ಕಾಯಿಲೆಗಳ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚದ ವಿವರಗಳೇನು ;

(ಆ) ಸದರಿ ಚಿಕಿತ್ಸಾ ವೆಚ್ಚಗಳನ್ನು ಅವೈಜ್ಞಾನಿಕವಾಗಿ ಅತೀ ಕಡಿಮೆ ನಿಗದಿ ಮಾಡಿರುವುದು ಮತ್ತು ಮರುಪಾವತಿ ಮಾಡುವಲ್ಲಿ ಸಾಕಷ್ಟು ವ್ಯತ್ಯಯ ಹಾಗೂ ವಿಳಂಬವಾಗುತ್ತಿರುವುದರಿಂದ ಕಾರ್ಮಿಕರು ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈಗಾಗಲೇ ಜಾರಿಗೆ ತಂದಿರುವ "ಹೆಲ್ತ್ ಚೆಕಪ್ ಕ್ಯಾಂಪ್" ಗಳು ಅನಾವಶ್ಯಕ ದುಂದು ವೆಚ್ಚವಾಗಿದ್ದು, ಅವುಗಳಿಂದ ಕಾರ್ಮಿಕರಿಗೆ ಯಾವುದೇ ರೀತಿಯಲ್ಲಿ ಪೂರ್ಣ ಮಟ್ಟದ ಪ್ರಯೋಜನ ದೊರೆಯುತ್ತಿಲ್ಲ ಎಂಬ ಅಭಿಪ್ರಾಯವಿದ್ದು, ಈ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ವೈದ್ಯಕೀಯ ಸಹಾಯಧನ, ಪ್ರಮುಖ ಕಾಯಿಲೆಗಳ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚವನ್ನು ಪೂರ್ಣವಾಗಿ ಕಾರ್ಮಿಕರಿಗೆ ಪಾವತಿಸಲು ಅಗತ್ಯ ಕ್ರಮ ವಹಿಸುವುದು ಅಥವಾ ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೇವೆ ಅಥವಾ ಯಶಸ್ವಿನಿ ಮಾದರಿ ಆರೋಗ್ಯ ವಿಮೆಯನ್ನು ಜಾರಿಗೊಳಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮ ವಹಿಸುವುದೇ ?

## ಪ್ರದೇಶಾಭಿವೃದ್ಧಿ ಮಂಡಳಿಯ ಸಭೆಗಳಿಗೆ ವಿಧಾನ ಪರಿಷತ್ ಸದಸ್ಯರನ್ನು ಆಹ್ವಾನಿಸದಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೭ (೧೫೪೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಧಾನ ಸಭೆಯಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ ವಿಧಾನ ಪರಿಷತ್ತಿನ ಸದಸ್ಯರು ನೋಡಲ್ ಜಿಲ್ಲೆಗಳನ್ನು ಆಯ್ಕೆ ಮಾಡಿಕೊಂಡಿದ್ದರೂ ಸಹ ಆ ನೋಡಲ್ ಜಿಲ್ಲೆ ವ್ಯಾಪ್ತಿಯನ್ನೊಳಗೊಂಡ ಪ್ರದೇಶಾಭಿವೃದ್ಧಿ ಮಂಡಳಿಗಳ ಸಭೆಗಳಿಗೆ ವಿಧಾನ ಪರಿಷತ್ ಸದಸ್ಯರನ್ನು ಆಹ್ವಾನಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಆಹ್ವಾನಿಸದೆ ಇರಲು ಕಾರಣಗಳೇನು ;

(ಇ) ನೋಡಲ್ ಜಿಲ್ಲೆಯ ವ್ಯಾಪ್ತಿಯನ್ನೊಳಗೊಂಡ ಸಭೆಗಳಿಗೆ ಕ್ಷೇತ್ರಗಳಿಲ್ಲದ ವಿಧಾನ ಪರಿಷತ್ತಿನ ಶಾಸಕರನ್ನು ಆಹ್ವಾನಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ಒದಗಿಸುವುದು)

# ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಸರ್ಕಾರದ ಖಾತೆಗೆ ವಾಪಸ್ ಪಡೆದಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೫೮ (೧೫೪೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಿಂದ ಶಾಸಕರ ಪ್ರದೇಶಾಭಿವೃದ್ಧಿ ನಿಧಿಗೆ ಒದಗಿಸಿದ್ದ ಅನುದಾನವನ್ನು ಸರ್ಕಾರದ ಖಾತೆಗೆ ವಾಪಸ್ ಪಡೆದಿರುವ ಪ್ರಕರಣಗಳೆಷ್ಟು ; ಈ ರೀತಿ ವಾಪಸ್ ಪಡೆಯಲು ಕಾರಣಗಳೇನು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಶಾಸಕರು ಸೂಚಿಸಿರುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ತೊಡಕುಗಳಿದ್ದಲ್ಲಿ ಸಂಬಂಧಿಸಿದ ಶಾಸಕರ ಗಮನಕ್ಕೆ ತರಬೇಕೆನ್ನುವುದು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಮಾರ್ಗಸೂಚಿಯಲ್ಲಿದೆಯೇ ?

(ಇ) ಇದ್ದಲ್ಲಿ, ಸರ್ಕಾರಕ್ಕೆ ಅನುದಾನ ವಾಪಸ್ ಪಡೆಯುವ ಮೊದಲು ಈ ರೀತಿ ಮಾರ್ಗ ಸೂಚಿಯನ್ನು ಪಾಲಸಲಾಗಿದೆಯೇ ಅಥವಾ ಇಲ್ಲವೆ ಎಂಬುದರ ಬಗ್ಗೆ ಪರಿಶೀಲನೆ ನಡೆಸಲಾಗಿದೆಯೇ ; ಪರಿಶೀಲಿಸಲಾಗಿದ್ದರೆ, ಮಾರ್ಗಸೂಚಿ ಪ್ರಕಾರ ಸಂಬಂಧಿಸಿದ ಶಾಸಕರಿಗೆ ಮಾಹಿತಿ ಒದಗಿಸಲು ವಿಫಲರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದೆ ;

(ಈ) ಅಧಿಕಾರಿಗಳ ನಿರ್ಲಕ್ಷ್ಯದಿಂದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ವಿಳಂಬವಾಗಿ ಸರ್ಕಾರಕ್ಕೆ ಅನುದಾನ ವಾಪಸ್ ಹೋಗಿದ್ದರೆ ಅಂತಹ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಿದೆ ; ವಾಪಸ್ ಪಡೆದಿರುವ ಅನುದಾನವನ್ನು ಪುನಃ ಬಿಡುಗಡೆ ಮಾಡಲಾಗುವುದೆ ?

# ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ ಅನುದಾನವನ್ನು ವೆಚ್ಚ ಮಾಡದಿರುವ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೪೫ (೧೫೪೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೦೨೪ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಉಪ ಯೋಜನೆಗಳಿಗೆ ಮೀಸಲಿಟ್ಟಿದ್ದ ಮತ್ತು ಬಿಡುಗಡೆ ಮಾಡಿದ ಹಣವೆಷ್ಟು; ಬಿಡುಗಡೆಗೆ ಬಾಕಿಯಿರುವ ಹಣವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಈ ಪೈಕಿ ವೆಚ್ಚ ಮಾಡಿರುವ ಹಣವೆಷ್ಟು ; ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಎಷ್ಟು ಜನ ಫಲಾನುಭವಿಗಳಿಗೆ ಇದರಿಂದ ಅನುಕೂಲವಾಗಿದೆ ; (ಕಾರ್ಯಕ್ರಮವಾರು/ಯೋಜನೆವಾರು ವಿವರ ನೀಡುವುದು)

(ಇ) ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ ಹಣವನ್ನು ಪೂರ್ಣ ಪ್ರಮಾಣದಲ್ಲಿ ವೆಚ್ಚ ಮಾಡದಿರಲು ಕಾರಣಗಳೇನು ; ಹಣ ವೆಚ್ಚ ಮಾಡದ್ದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ; ಅವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಹಣದಲ್ಲಿ ಎಷ್ಟು ಹಣವನ್ನು ಸರ್ಕಾರ ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಿದೆ ; ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಲು ಕಾರಣಗಳೇನು ? (ಸಂಪೂರ್ಣ ವಿವರ ನೀಡುವುದು)

## ಸ್ವಚ್ಛ ವಾಹಿನಿ ಯೋಜನೆಯ ಆಟೋ ಟಿಪ್ಪರ್‌ಗಳ ನಿರ್ವಹಣೆಗೆ ಅನುದಾನದ ಕೊರತೆಯಾಗಿರುವ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೦ (೧೫೪೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕಸ ವಿಲೇವಾರಿ ಮಾಡಲು ಎಷ್ಟು ಸ್ವಚ್ಛವಾಹಿನಿ ಆಟೋ ಟಿಪ್ಪರ್‌ಗಳು ಕಾರ್ಯನಿರ್ವಹಿಸುತ್ತಿವೆ ; ಈ ಗ್ರಾಮ ಪಂಚಾಯಿತಿಗಳು ಯಾವ ಅನುದಾನದಲ್ಲಿ ಈ ಆಟೋ ಟಿಪ್ಪರ್‌ಗಳ ಕಾರ್ಯಾಚರಣೆ ಹಾಗೂ ನಿರ್ವಹಣೆಯನ್ನು ಮಾಡುತ್ತಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಡಿಮೆ ಸ್ವಂತ ಸಂಪನ್ಮೂಲವಿರುವ ಗ್ರಾಮ ಪಂಚಾಯಿತಿಗಳಿಗೆ ಈ ಆಟೋ ಟಿಪ್ಪರ್‌ಗಳನ್ನು ನಿರ್ವಹಣೆ ಮಾಡಲು ಕಷ್ಟವಾಗುತ್ತಿರುವುದು, ಸಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ಒದಗಿಸುವುದು)

(ಇ) ೧೫ನೇ ಹಣಕಾಸು ಯೋಜನೆಯಡಿಯಲ್ಲಿ ಈ ಆಟೋ ಟಿಪ್ಪರ್‌ಗಳ ಕಾರ್ಯಾಚರಣೆ ಹಾಗೂ ನಿರ್ವಹಣೆ ಮಾಡಲು ಅವಕಾಶ ಕಲ್ಪಿಸಲಾಗಿದೆಯೇ ; (ಕಲ್ಪಿಸಿದ್ದರೆ, ಆದೇಶದ ಪ್ರತಿ ಒದಗಿಸುವುದು ; ಸ್ವಚ್ಛ ವಾಹಿನಿಗಳ ಕಾರ್ಯಾಚರಣೆ ಹಾಗೂ ನಿರ್ವಹಣೆಗೆ ಅವಕಾಶ ಕಲ್ಪಿಸಲಾಗುವುದೇ ?

## ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಕಾಯಕಲ್ಪ ನೀಡುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೧ (೧೫೨೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡಕ್ಕೆ ಶಾಸ್ತ್ರೀಯ ಭಾಷಾ ಸ್ಥಾನಮಾನ ದೊರೆತು ಎಷ್ಟು ವರ್ಷಗಳಾಗಿವೆ ; ಆ ಬಳಿಕ ಸ್ಥಾಪನೆಯಾಗಿರುವ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ, ಸ್ವಾಯತ್ತತೆಯನ್ನು ನೀಡಲಾಗಿದೆಯೇ ; ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಸ್ವಂತ ಜಾಗ ಮತ್ತು ಕಟ್ಟಡ ಒದಗಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಸ್ವಂತ ಜಾಗ ಮತ್ತು ಕಟ್ಟಡ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕನ್ನಡ ಭಾಷೆ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ? (ವರ್ಷವಾರು ವಿವರ ನೀಡುವುದು)

## ಸಬ್ಸಿಡಿ ಯೂರಿಯಾವನ್ನು ಅಕ್ರಮವಾಗಿ ಕೈಗಾರಿಕೆಗಳಿಗೆ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೨ (೧೫೨೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿತರಣೆಯಾಗುತ್ತಿರುವ ಸಬ್ಸಿಡಿ ಯೂರಿಯಾವನ್ನು (ಗೊಬ್ಬರ) ಅಕ್ರಮವಾಗಿ ಕೈಗಾರಿಕೆಗಳಿಗೆ ಮಾರಾಟ ಮಾಡುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ ;

(ಇ) ಅಕ್ರಮ ಯೂರಿಯಾ ಮಾರಾಟವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕಾರ್ಮಿಕರ ಕನಿಷ್ಠ ವೇತನ ಕಾಯ್ದೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೩ (೧೫೨೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಮಿಕರ ಕನಿಷ್ಠ ವೇತನ ಕಾಯ್ದೆಯನ್ನು ಎಷ್ಟು ವರ್ಷಗಳಿಗೊಮ್ಮೆ ಪರಿಷ್ಕರಿಸಲಾಗುತ್ತಿದೆ ; ಈ ಹಿಂದೆ ಯಾವ ಯಾವ ವರ್ಷಗಳಲ್ಲಿ ಕಾರ್ಮಿಕರ ಕನಿಷ್ಠ ವೇತನ ಕಾಯ್ದೆಯನ್ನು ಜಾರಿಗೊಳಿಸಿದೆ ; ಈ ಕಾಯ್ದೆಯಲ್ಲಿ ಕಾರ್ಮಿಕರಿಗೆ ನಿಗದಿಪಡಿಸಿದ ಕನಿಷ್ಠ ವೇತನವೆಷ್ಟು ; (ವಿವರ ನೀಡುವುದು)

(ಆ) ಕಾರ್ಮಿಕರ ಕನಿಷ್ಠ ವೇತನ ಕಾಯ್ದೆಯ ವ್ಯಾಪ್ತಿಯಲ್ಲಿ ಯಾವ ಯಾವ ಉದ್ಯೋಗಗಳನ್ನು ಗುರುತಿಸಲಾಗಿದೆ ; ಅವರ ಸಂಖ್ಯೆ ಎಷ್ಟು ; ಈ ಉದ್ಯೋಗಗಳಿಗೆ ಪ್ರತ್ಯೇಕವಾದ ಕನಿಷ್ಠ ವೇತನಗಳನ್ನು ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಕಾರ್ಮಿಕರು ತಾಂತ್ರಿಕ ಕೌಶಲ್ಯತೆಯ ಪರಿಣತಿ ಹೊಂದಲು ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ? (ಮಾಹಿತಿ ನೀಡುವುದು)

## ಉಚಿತ ಆರೋಗ್ಯ ಸೇವೆಯಲ್ಲಿನ ಭ್ರಷ್ಟಾಚಾರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೪ (೧೫೧೮+೧೫೨೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ಬಡ ಕಟ್ಟಡ ಕಾರ್ಮಿಕರಿಗೆ ಉಚಿತ ಆರೋಗ್ಯ ಸೇವೆ ನೀಡಲು KTPP ACT

1999 ಮತ್ತು 2000 ಉಲ್ಲಂಘಿಸಿ ಯಾವುದೇ ಸಿಬ್ಬಂದಿ, ಆಸ್ಪತ್ರೆ ಹೊಂದಿಲ್ಲದ ಕೇವಲ ೩ ಬೆಡ್ ರೂಮ್ ಮನೆಯ ವಿಳಾಸದಲ್ಲಿರುವ ಬ್ಲಾಸಂ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಬೆಂಗಳೂರು ರವರಿಗೆ ಟೆಂಡರ್ ನೀಡಿರುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ಯಾವುದೇ ಅನುಭವ ಸೌಲಭ್ಯಗಳು ಇಲ್ಲದ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ WP 13046/2024 ಇನ್ನೂ ತೀರ್ಮಾನಕ್ಕೆ ಬಾಕಿ ಇದೆ, ಆದರೂ ತರಾತುರಿಯಲ್ಲಿ Blossom Multispecialty Hospital ಗೆ 100 MMU Operation & Management ಗೆ ಕಾರ್ಯಾದೇಶ ನೀಡಿರುವುದರ ಉದ್ದೇಶವೇನು ; ಈ ಭ್ರಷ್ಟಾಚಾರದ ಬಗ್ಗೆ, ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ಬಡ ಕಟ್ಟಡ ಕಾರ್ಮಿಕರಿಗೆ Preventive Health Care Check up ಕರೆದ ಟೆಂಡರ್‌ನಲ್ಲಿ ತಮಗೆ ಬೇಕಾದ ೦೫ ಸಂಸ್ಥೆಗಳಿಗೆ ಮಾತ್ರವೇ ಭಾಗವಹಿಸಲು ಅನುಮತಿ ನೀಡಿ ೬೫೦ ಕೋಟಿ ರೂ.ಗಳಿಗೂ ಅಧಿಕ ಮೊತ್ತದ ಭ್ರಷ್ಟಾಚಾರ ವೆಸಗಿರುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಈ ಕುರಿತು ಮಾನ್ಯ ನ್ಯಾಯಾಲಯದಲ್ಲಿ WP 9707/2023 ಬಾಕಿ ಇದ್ದರೂ Blossom Multispecialty Hospital ಗೆ ಟೆಂಡರ್ ನೀಡಲು ಕಾರಣವೇನು ; ಸಂಸ್ಥೆಯು ಸರಿಯಾಗಿ ಕರ್ತವ್ಯ ನಿರ್ವಹಿಸುತ್ತಿಲ್ಲ ಎಂಬ ಕಾರಣಕ್ಕಾಗಿ ನೋಟೀಸು ನೀಡಿ ದಂಡ ಕಟ್ಟಿಕೊಂಡ ಬಳಿಕವೂ ಅದೇ ಸಂಸ್ಥೆಗೆ ಟೆಂಡರ್ ನೀಡಲು ಕಾರಣವೇನು ? (ವಿವರ ನೀಡುವುದು)

## ಯು.ಡಿ.ಐ.ಡಿ. ಕಾರ್ಡ್‌ಗಳನ್ನು ವಿತರಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೫ (೧೫೧೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಗವಿಕಲರಿಗೆ ನೀಡಲಾಗುತ್ತಿರುವ ಯು.ಡಿ.ಐ.ಡಿ. ಕಾರ್ಡಗಳನ್ನು ವಿತರಿಸುವಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾತ್ರವೇನು ; (ಮಾಹಿತಿ ಒದಗಿಸುವುದು)

(ಆ) ಈ ಯು.ಡಿ.ಐ.ಡಿ. ಕಾರ್ಡಗಳನ್ನು ನೀಡುತ್ತಿರುವ ಉದ್ದೇಶವೇನು ; ಇದಕ್ಕಾಗಿ ಮೀಸಲಿಟ್ಟಿರುವ ಅನುದಾನ ಎಷ್ಟು ; ಯಾವ ಸಂಸ್ಥೆಯ ಮೂಲಕ ಈ ಕಾರ್ಡ್‌ಗಳನ್ನು ವಿತರಿಸಲಾಗುತ್ತಿದೆ ;

(ಇ) ರಾಜ್ಯದಲ್ಲಿ ಇಲ್ಲಿಯವರೆಗೆ ಅಂಗವಿಕಲರ ನೋಂದಣಿಗಾಗಿ ಮಾಡಲಾಗಿರುವ ಯು.ಡಿ.ಐ.ಡಿ ಕಾರ್ಡ್‌ಗಳನ್ನು ಎಷ್ಟು ಸಂಖ್ಯೆಯಲ್ಲಿ ನೀಡಲಾಗಿದೆ ; (ಜಿಲ್ಲಾವಾರು, ಅಂಗವೈಕಲ್ಯವಾರು ಮತ್ತು ಲಿಂಗವಾರು ಮಹಿಳಾ ಮತ್ತು ಪುರುಷ ಇತರೆ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಈ) ಯು.ಡಿ.ಐ.ಡಿ. ಕಾರ್ಡ್‌ಗಳನ್ನು ಯಾರು ಯಾರಿಗೆ ನೀಡಲಾಗುತ್ತಿದೆ ; ಇದರಲ್ಲಿ ೪೦% ಮೇಲಿನ ಅಂಗವಿಕಲತೆಯನ್ನು ಯಾವ ರೀತಿಯಲ್ಲಿ ನಮೂದಿಸಲಾಗುತ್ತಿದೆ ; ಈ ಕಾರ್ಡ್‌ನ್ನು ಯಾವ ಯಾವ ಸರ್ಕಾರಿ ಸೌಲಭ್ಯಗಳಿಗೆ ಬಳಸಬಹುದಾಗಿದೆ ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ಕೃಷಿ ಇಲಾಖೆಯ ವಿವಿಧ ಯೋಜನೆಗಳಿಗೆ ಅನುದಾನ ಬಿಡುಗಡೆಯಾಗದ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೬ (೧೫೧೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಿಗೆ ಕೃಷಿ ಇಲಾಖೆಯ ವಿವಿಧ ಯೋಜನೆಗಳಡಿಯಲ್ಲಿ (ಸಿಂಚಾಯಿ ಯೋಜನೆ, ಕೃಷಿ ಯಂತ್ರೋಪಕರಣ ವಿತರಣೆ, ಆಹಾರ ಮಾತ್ತು ಪೌಷ್ಠಿಕತೆ ಭದ್ರತಾ ಯೋಜನೆ, ಕೃಷಿ ವಿಕಾಸ ಯೋಜನೆ) ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ೨೦೨೪–೨೫ನೇ ಸಾಲಿನ ಕೃಷಿ ಇಲಾಖೆಯು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗೆ ವಿವಿಧ ಯೋಜನೆಯಡಿ (ಸಿಂಚಾಯಿ ಯೋಜನೆ, ಕೃಷಿ ಯಂತ್ರೋಪಕರಣ ವಿತರಣೆ, ಆಹಾರ ಮತ್ತು ಪೌಷ್ಠಿಕತೆ ಭದ್ರತಾ ಯೋಜನೆ, ಕೃಷಿ ವಿಕಾಸ ಯೋಜನೆ) ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಸಾಲಿನಲ್ಲಿ ಕೃಷಿ ಇಲಾಖೆಯ ವಿವಿಧ ಯೋಜನೆಯ ಅನುದಾನ ಬಿಡುಗಡೆ ಮಾಡಲು ಯಾವ ಕ್ರಮ ಜರುಗಿಸಲಾಗಿದೆ ; ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆ ಮಡಲಾಗುವುದು ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಒಂದೇ ಉದ್ದೇಶವಿರುವ ಯೋಜನೆಗಳ ಸಮೀಕರಿಸುವ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೬೭ (೧೫೧೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಂದೇ ಉದ್ದೇಶವಿರುವ ಯೋಜನೆಗಳನ್ನು ಸಮೀಕರಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳನ್ನು ಸಮೀಕರಿಸಲು ನಿರ್ಧರಿಸಲಾಗಿದೆ ; (ಇಲಾಖಾವಾರು ಮತ್ತು ಯೋಜನೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಗಳನ್ನು ವಿಲೀನಗೊಳಿಸಲು ಮತ್ತು ಮುಕ್ತಾಯಗೊಳಿಸಲು ಕಾರಣಗಳೇನು ;

(ಈ) ಸದರಿ ಯೋಜನೆಗಳ ಸಮೀಕರಣಗೊಳಿಸಲು ಅನುಸರಿಸುವ ಮಾನದಂಡಗಳು ಯಾವುವು ? (ವಿವರ ನೀಡುವುದು)

## ರಾಮ ಕ್ಷತ್ರಿಯ ಜನಾಂಗಕ್ಕೆ ಹಿಂದುಳಿದ ವರ್ಗದ ಜಾತಿ ಪ್ರಮಾಣ ಪತ್ರ ಸಿಗುವಲ್ಲಿ ಆಗುತ್ತಿರುವ ತೊಂದರೆಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೩೬೮ (೧೫೮೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಉತ್ತರ ಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ವಾಸಿಸುವ ಹಿಂದೂ–ಕ್ಷತ್ರಿಯ ಜನಾಂಗವನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಲಾಗಿದೆಯೇ ; ಯಾವ ಮೀಸಲಾತಿ ಪಟ್ಟಿಯಲ್ಲಿ ಸೇರಿಸಲಾಗಿದೆ ; (ವಿವರ ನೀಡುವುದು)

(ಆ) ರಾಮ ಕ್ಷತ್ರಿಯರು ಯಾವ ಮೀಸಲಾತಿ ಅಡಿಯಲ್ಲಿ ಸೇರುತ್ತಾರೆ ; ರಾಮ ಕ್ಷತ್ರಿಯರು, ಹಿಂದೂ–ಕ್ಷತ್ರಿಯರವರು ಒಂದೇ ಜಾತಿ ವರ್ಗಕ್ಕೆ ಸೇರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಮ ಕ್ಷತ್ರಿಯರು ಶಾಲಾ ದಾಖಲಾತಿಗಳಲ್ಲಿ ಹಿಂದೂ ಕ್ಷತ್ರಿಯ ಎಂದು ನಮೂದಿಸಿದ್ದು, ಈಗ ಹಿಂದುಳಿದ ವರ್ಗದ ಜಾತಿ ಪ್ರಮಾಣ ಪತ್ರ ಪಡೆಯಲಾಗದೆ ಶಿಕ್ಷಣ ಸೌಲಭ್ಯ ಹಾಗೂ ಸರ್ಕಾರಿ ಉದ್ಯೋಗದ ಮೀಸಲಾತಿಯಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಹಿಂದೂ–ಕ್ಷತ್ರಿಯ ಎಂದು ನಮೂದಿಸಿದ್ದವರಿಗೆ ಮೀಸಲಾತಿ ಕಲ್ಪಿಸುವ ಸಂಬಂಧ ಹಿಂದುಳಿದ ವರ್ಗಗಳ ಆಯೋಗ ನೀಡಿರುವ ಶಿಫಾರಸ್ಸುಗಳೇನು ; ವರದಿಯ ಪ್ರತಿ ನೀಡುವುದು ; ಹಿಂದುಳಿದ ವರ್ಗಗಳ ಪ್ರಮಾಣ ಪತ್ರ ವಿತರಿಸಲು ಇರುವ ತೊಡಕುಗಳೇನು ;

(ಉ) ಮೇಲ್ಕಂಡ ಜಿಲ್ಲೆಗಳ ಭಾಗದಲ್ಲಿರುವ ರಾಮ ಕ್ಷತ್ರಿಯರು ಶಾಲಾ ದಾಖಲಾತಿಗಳಲ್ಲಿ ಹಿಂದೂ–ಕ್ಷತ್ರಿಯ ಎಂದು ನಮೂದಿಸಿದ್ದವರಿಗೆ ಕೇಂದ್ರ ಓ.ಬಿ.ಸಿ ಪಟ್ಟಿಗೆ ಸೇರಿಸಲು ಪ್ರಸ್ತಾವನೆ ಸಲ್ಲಿಸುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಯಾವ ಕಾಲಮಿತಿಯಲ್ಲಿ ಶಿಫಾರಸ್ಸು ಮಾಡಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ?

## ಪದ್ಮಶ್ರೀ ಪುರಸ್ಕೃತರಾದ ಶ್ರೀಮತಿ ಸುಕ್ರಿ ಬೊಮ್ಮುಗೌಡ ಮತ್ತು ಶ್ರೀಮತಿ ತುಳಿಸಿ ಗೌಡ ಇವರ ಸ್ಮಾರಕ ನಿರ್ಮಿಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೩೬೯ (೧೫೮೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದ್ಮಶೀ ಪುರಸ್ಕೃತರಾದ ಉತ್ತರ ಕನ್ನಡ ಜಿಲ್ಲೆಯ ಶ್ರೀಮತಿ ಸುಕ್ರಿ ಬೊಮ್ಮುಗೌಡ ಮತ್ತು ಶ್ರೀಮತಿ ತುಳಿಸಿಗೌಡ, ಸ್ಮಾರಕ ನಿರ್ಮಿಸುವ ಯೋಚನೆ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಸ್ಮಾರಕ ನಿರ್ಮಿಸುವ ಕುರಿತು ಸರ್ಕಾರದ ಮುಂದಿನ ಕ್ರಮಗಳೇನು ; (ವಿವರ ನೀಡುವುದು)

(ಆ) ಇಲ್ಲದಿದ್ದಲ್ಲಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಇವರ ಸ್ಮಾರಕ ನಿರ್ಮಿಸಲು ಸರ್ಕಾರ ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳುವುದೇ ? (ಮಾಹಿತಿ ನೀಡುವುದು)

# ಕೆಲವು ಗೌಳಿ ಜನಾಂಗದವರು ಧನಗರ್ ಜಾತಿ ಅಡಿಯಲ್ಲಿ ಜಾತಿ ಪ್ರಮಾಣ ಪತ್ರ ಪಡೆಯುತ್ತಿರುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೩೭೦ (೧೫೮೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ಧಾರವಾಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಹಿಂದುಳಿದ ವರ್ಗಗಳ ಗೌಳಿ (ಧನಗರ್ ಗೌಳಿ) ಜಾತಿಯು ಸರ್ಕಾರದ ಯಾವ ಪಟ್ಟಿಯಲ್ಲಿ ಸೇರಿಸಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನಲ್ಲಿ ಮಾತ್ರ ಗೌಳಿ ಜನಾಂಗದವರು ತಪ್ಪಾಗಿ ಧನಗರ್ ಜಾತಿ ಪ್ರಮಾಣ ಪತ್ರ ಪಡೆಯುತ್ತಿರುವುದರಿಂದ ಶೈಕ್ಷಣಿಕ ಮತ್ತು ಉದ್ಯೋಗದ ಮೀಸಲಾತಿಯಲ್ಲಿ ಅನ್ಯಾಯ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಸದರಿ ತಾಲ್ಲೂಕಿನ ಧನಗರ್ ಜನಾಂಗವು ಕೂಡ ಇತರೆ ಜಿಲ್ಲೆಯಲ್ಲಿ ತಮ್ಮ ಜನಾಂಗದವರೇ ಪಡೆಯುವ ಗೌಳಿ ಜಾತಿಯ ಪ್ರಮಾಣ ಪತ್ರ ಪಡೆಯಲು ಇರುವ ಮಾನದಂಡಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಖಾನಾಪುರ ತಾಲ್ಲೂಕಿನ ಈ ಜನಾಂಗಕ್ಕೆ ಕೂಡ ಗೌಳಿ ಜಾತಿ ಪ್ರಮಾಣ ಪತ್ರ ನೀಡಲು ಸರ್ಕಾರದ ಮುಂದಿನ ಕ್ರಮಗಳೇನು ?

# ಹಿಂದುಳಿದ ವರ್ಗದ ಗೌಳಿ ಸಮುದಾಯಕ್ಕೆ ಸಮುದಾಯ ಭವನ ನಿರ್ಮಿಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೩೭೧ (೧೫೮೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ಧಾರವಾಡ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಹಿಂದುಳಿದ ವರ್ಗದ ಪ್ರವರ್ಗ–೧ರಲ್ಲಿ ಬರುವ ಚಿಕ್ಕ ಸಮುದಾಯವಾದ ಗೌಳಿ (ಧನಗರ್ ಗೌಳಿ) ಸಮುದಾಯದವರಿಗೆ ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ ಬಿಟ್ಟರೆ ಬೇರೆ ಯಾವ ಜಿಲ್ಲೆ ಅಥವಾ ತಾಲ್ಲೂಕಿನಲ್ಲಿಯೂ ಗೌಳಿ ಜನಾಂಗದ ಸಮುದಾಯ ಭವನ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಮುಂದಿನ ಕ್ರಮಗಳೇನು ; (ವಿವರ ನೀಡುವುದು)

(ಆ) ಆದ್ಯತೆಯ ಮೇರೆಗೆ ಬೆಳಗಾವಿ, ಧಾರವಾಡ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಗೌಳಿ ಸಮಾಜದ ತಾಲ್ಲೂಕು ಅಥವಾ ಜಿಲ್ಲೆಗೊಂದು ಸಮುದಾಯ ಭವನವನ್ನು ನಿರ್ಮಾಣ ಮಾಡುವ ಬಗ್ಗೆ ಸರ್ಕಾರದ ಮುಂದಿನ ಯೋಜನೆ ಏನು ? (ಸಂಪೂರ್ಣ ಮಾಹಿತಿ ನೀಡುವುದು)

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿ ವೇತನದ ಮಾಹಿತಿ

**ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೭೨ (೧೫೪೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪಾವತಿಸಲಾಗಿದೆಯೇ ;

(ಆ) ಪಾವತಿಸಿದ್ದಲ್ಲಿ, ಜಾತಿವಾರು ಮತ್ತು ಪ್ರವರ್ಗವಾರು ಪಾವತಿಸಿರುವ ಮೊತ್ತ ಎಷ್ಟು ; ಪಾವತಿಸದೇ ಇದ್ದಲ್ಲಿ, ಕಾರಣವೇನು ; (ಮಾಹಿತಿಯನ್ನು ನೀಡುವುದು)

(ಇ) ಎಲ್ಲಾ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅತೀ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೇ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಪ್ರಕರಣಗಳು ಬಂದಿರುತ್ತವೆ ; ಈ ರೀತಿಯ ಪ್ರಕರಣಗಳ ಬಗ್ಗೆ ಸರ್ಕಾರದ ನಿಲುವುಗಳೇನು ; ಕ್ರಮಗಳೇನು ;

(ಈ) ಹಿಂದುಳಿದ ವರ್ಗಗಳ ಎಲ್ಲಾ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಿದ್ದಲ್ಲಿ, ಎಲ್ಲರಿಗೂ ವಿದ್ಯಾರ್ಥಿ ವೇತನ ನೀಡದಿರಲು ಕಾರಣಗಳೇನು ?

# ಪ್ರವರ್ಗ–೧ರ ಜಾತಿಗೆ ಕಲ್ಯಾಣ ಕರ್ನಾಟಕಕ್ಕೆ ಅನುದಾನದ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೭೩ (೧೬೦೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಲ್ಲಿ ಹೈದರಾಬಾದ್–ಕರ್ನಾಟಕ ಕಲ್ಯಾಣ ಕರ್ನಾಟಕದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಿಗೆ ಪರಿಶಿಷ್ಟ ಜಾತಿ ಜನಾಂಗದವರ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಬಿಡುಗಡೆ ಮಾಡಿರುವ ಅನುದಾನದಲ್ಲಿ ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ ; ಬಿಡುಗಡೆಯಾದ ಹಣವು ಖರ್ಚಾಗಿದೆಯೇ ; ಖರ್ಚಾಗದೆ ಇದ್ದಲ್ಲಿ, ಉಳಿಕೆಯಾದ ಅನುದಾನ ಎಷ್ಟು ಮತ್ತು ಯಾವ ಕಾರಣಕ್ಕಾಗಿ ಉಳಿಕೆಯಾಗಿದೆ ;

(ಇ) ಕಲ್ಯಾಣ ಕರ್ನಾಟಕ ವಿಭಾಗದಲ್ಲಿ ಬರುವ ಜಿಲ್ಲೆಗಳಲ್ಲಿ ನಿರ್ಮಾಣಗೊಂಡಿರುವ ಅಂಬೇಡ್ಕರ್ ಭವನಗಳ ಸಂಖ್ಯೆ ಎಷ್ಟು ; ಪೂರ್ಣಗೊಳ್ಳದೆ ಇರುವ ಭವನಗಳ ಸಂಖ್ಯೆ ಎಷ್ಟು ; ಪೂರ್ಣಗೊಂಡ ಭವನಗಳ ನಿರ್ವಹಣೆಯ ಜವಾಬ್ದಾರಿಯನ್ನು ಯಾರಿಗೆ ನೀಡಲಾಗಿದೆ ; ಯಾವ ರೀತಿ ನಿರ್ವಹಿಸುತ್ತಿದ್ದಾರೆ ; ಇದರ ಬಗ್ಗೆ ಮೌಲ್ಯಮಾಪನ ಮಾಡಲಾಗಿದೆಯೇ ? (ಮಾಹಿತಿ ಒದಗಿಸುವುದು)

# ಹಿಂದುಳಿದ ವರ್ಗಗಳ ಜಾತಿಗಾಗಿ ಕುಲಶಾಸ್ತ್ರೀಯ ಅಧ್ಯಯನದ ಅನುದಾನದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೭೪ (೧೬೦೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಮತ್ತು ೨೪–೨೫ನೇ ಸಾಲಿನಲ್ಲಿ ಅತಿ ಹಿಂದುಳಿದ ಪ್ರವರ್ಗ ಒಂದರ ಜಾತಿಗಳಲ್ಲಿ ಯಾವ ಯಾವ ಜಾತಿಗಾಗಿ ಕುಲಶಾಸ್ತ್ರೀಯ ಅಧ್ಯಯನ ನಡೆಸಲು ಎಷ್ಟು ಅನುದಾನವನ್ನು ನಿಗದಿಪಡಿಸಲಾಗಿದೆ ; (ಜಾತಿವಾರು ಮಾಹಿತಿ ನೀಡುವುದು)

(ಆ) ಅತೀ ಹಿಂದುಳಿದ ಪ್ರವರ್ಗ–೧ರ ಜಾತಿಗಳಲ್ಲಿ ಬರುವ ಅಲೆಮಾರಿ ಜನಾಂಗದವರಿಗೆ ಕುಲಶಾಸ್ತ್ರೀಯ ಅಧ್ಯಯನಕ್ಕಾಗಿ ಮೀಸಲಿಟ್ಟಿರುವ ಅನುದಾನವನ್ನು ಅಲೆಮಾರಿಗಳಲ್ಲದ ಜಾತಿಗಳ ಕುಲ ಶಾಸ್ತ್ರೀಯ ಅಧ್ಯಯಕ್ಕೆ ಬಳಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ರೀತಿಯಾಗಿ ಅಲೆಮಾರಿಗಳಲ್ಲದ ಜಾತಿಗಳಿಗೆ ಅನುದಾನವನ್ನು ಬಳಸಿಕೊಂಡು ಕುಲ ಶಾಸ್ತ್ರೀಯ ಅಧ್ಯಯನದ ಆದೇಶ ಮಾಡಿರುವ ಅಧಿಕಾರಿಗಳ ವಿರುದ್ಧ ಸರ್ಕಾರದ ಕ್ರಮಗಳೇನು ;

(ಈ) ಡಿ.ದೇವರಾಜ ಅರಸು ಸಂಶೋಧನಾ ಸಂಸ್ಥೆಯ ಮೇಲೆ ಪ್ರಭಾವ ಬೀರಿ ಅಲೆಮಾರಿಗಳ ಕುಲಶಾಸ್ತ್ರೀಯ ಅಧ್ಯಯನಕ್ಕಾಗಿ ಬಿಡುಗಡೆಯಾದ ಅನುದಾನವನ್ನು ದುರುಪಯೋಗ ಮಾಡಿಕೊಂಡಿರುವ ಅಧಿಕಾರಿಯ ವಿರುದ್ಧ ಯಾವ ರೀತಿಯ ಶಿಸ್ತುಕ್ರಮ ಜರುಗಿಸಲಾಗುವುದು ?

## ಪರಿಶಿಷ್ಟ ಜಾತಿಗಳ ಅಭಿವೃದ್ಧಿಗೆ ಅನುದಾನ ನೀಡಿರುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೭೫ (೧೬೦೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಯ ವಿಧಾನ ಸಭಾ ಕ್ಷೇತ್ರಗಳ ಪರಿಶಿಷ್ಟ ಜಾತಿ ಕಾಲೋನಿಗಳ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಈ ಬಿಡುಗಡೆಯಾದ ಅನುದಾನದಲ್ಲಿ ಇದುವರೆವಿಗೂ ಖರ್ಚಾದ ಅನುದಾನ ಎಷ್ಟು ; ಉಳಿಕೆ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಇ) ಹಿರಿಯೂರು ವಿಧಾನಸಭಾ ಕ್ಷೇತ್ರದ ಪರಿಶಿಷ್ಟ ಜಾತಿಯ ಜನಾಂಗದವರಿಗೆ ಡಾ|| ಬಿ.ಆರ್.ಅಂಬೇಡ್ಕರ್ ಭವನಗಳ ನಿರ್ಮಾಣಕ್ಕಾಗಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಯಾವ ಯಾವ ಗ್ರಾಮಗಳಿಗೆ ಬಿಡುಗಡೆ ಮಾಡಲಾಗಿದೆ ;

(ಈ) ಬಿಡುಗಡೆ ಮಾಡಲಾದ ಅನುದಾನದಲ್ಲಿ ಕಾಮಗಾರಿಗಳನ್ನು ಕೈಗೊಂಡಿರುವುದು ಎಷ್ಟು ; ಇನ್ನೂ ಕಾಮಗಾರಿಗಳನ್ನು ಕೈಗೊಳ್ಳದೆ ಇರುವ ಭವನಗಳು ಎಷ್ಟು ಮತ್ತು ಯಾವ ಕಾರಣದಿಂದ ಕಾಮಗಾರಿಯನ್ನು ಪ್ರಾರಂಭಿಸಿರುವುದಿಲ್ಲ ?

# ಅಲೆಮಾರಿಗಳು ಕನಿಷ್ಠ ಸೌಕರ್ಯಗಳಿಲ್ಲದೆ ಬದುಕು ನಡೆಸುತ್ತಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೩೭೬ (೧೫೫೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರದಲ್ಲಿ ರಿಂಗ್ ರೋಡ್‌ನಿಂದ ಆಳಂದಾಗೆ ಹೋಗುವ ರಸ್ತೆಯಲ್ಲಿ ಮತ್ತು ಶಹಾಬಾದ ರಸ್ತೆಯಲ್ಲಿ ಮುಳ್ಳು ಗಂಟೆಗಳು ಹಾಗೂ ತ್ಯಾಜ್ಯಗಳ ಮತ್ತು ಮಧ್ಯ ಜೋಪಡಿ ಹಾಕಿಕೊಂಡ ಅಲೆಮಾರು ಕುಟುಂಬಗಳನ್ನು ಸರ್ಕಾರ ಗಮನಿಸಿದೆಯೇ ;

(ಆ) ಕನಿಷ್ಠ ಸೌಕರ್ಯಗಳಿಲ್ಲದೆ, ಯಾವುದೇ ರಕ್ಷಣೆ ಇಲ್ಲದೆ ರಾತ್ರಿ ಕುಟುಂಬದ ಸದಸ್ಯರೊಂದಿಗೆ ಬದುಕುತ್ತಿರುವ ಅಲೆಮಾರಿಗಳು ವಸತಿ, ಶೌಚಾಲಯಗಳು, ಶಿಕ್ಷಣ ಮತ್ತು ಆರೋಗ್ಯ ಸೌಲಭ್ಯಗಳನ್ನು ಒದಗಿಸುವುದರ ಕುರಿತು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಸರ್ಕಾರ ಈ ಅಲೆಮಾರಿ ಕುಟುಂಬಗಳು ವಾಸಿಸುತ್ತಿರುವ ಜಾಗವನ್ನು ಅವರ ಹೆಸರಿಗೆ ವರ್ಗಾಯಿಸಿ ಹಕ್ಕು ಪತ್ರಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಹೆಸರಿಗೆ ಮಾತ್ರ ಇರುವ ಅಲೆಮಾರಿ ಇಲಾಖೆ ಅಲೆಮಾರಿ ಸಮುದಾಯಕ್ಕಾಗಿ ಇರುವ ಸರ್ಕಾರಿ ಯೋಜನೆಗಳು ಉದ್ಯೋಗಾವಕಾಶಗಳು ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಯಾವ ಕ್ರಮಕೈಗೊಂಡಿದೆ ?

# ಬೆಳಗಾವಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳ ಕೊರತೆ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೩೭೭ (೧೫೪೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಡಿ ಜಿಲ್ಲೆ ಬೆಳಗಾವಿಯಲ್ಲಿ ಹೆಚ್ಚಿನ ಶಿಕ್ಷಣ ಸಂಸ್ಥೆಗಳಿದ್ದು ತಾಲ್ಲೂಕು/ ಜಿಲ್ಲಾ ಮಟ್ಟದಲ್ಲಿ ಬಡ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಸತಿ ನಿಲಯಗಳ ಬೇಡಿಕೆಗೆ ತಕ್ಕಂತೆ ವಸತಿ ನಿಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮೀಣ ಪ್ರದೇಶಗಳಿಂದ ಪೋಸ್ಟ್ ಮೆಟ್ರಿಕ್ ಅಧ್ಯಯನಕ್ಕಾಗಿ ಜಿಲ್ಲೆಯಲ್ಲಿನ ಪಟ್ಟಣ/ನಗರಗಳಿಗೆ ಬರುವ ಹಿಂದುಳಿದ ವರ್ಗಗಳ ಸಂಖ್ಯೆ ಹೆಚ್ಚುತ್ತಿದ್ದು ಮುಂದಿನ ಶಿಕ್ಷಣಕ್ಕಾಗಿ ವಸತಿ ನಿಲಯಗಳು ಮತ್ತು ಇನ್ನಿತರ ಸೌಲಭ್ಯಗಳನ್ನು ಒದಗಿಸುವ ಕುರಿತು ಸರ್ಕಾರದ ಕ್ರಮವೇನು ;

(ಇ) ತೀರಾ ಬಡವರು ಮತ್ತು ಗ್ರಾಮೀಣ ಪ್ರದೇಶದವರಾದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಖಾಸಗಿಯಾಗಿ ಬಾಡಿಗೆ ರೂಮ್, ಪಿ.ಜಿ. ಊಟದ ವೆಚ್ಚ ಭರಿಸಲಾಗದೆ ಮಧ್ಯದಲ್ಲಿ ಶಿಕ್ಷಣ ನಿಲ್ಲಿಸುತ್ತಿರುವುದು ಅವರ ಶಿಕ್ಷಣದ ಹಕ್ಕು ಕಸಿದುಕೊಂಡಂತಲ್ಲವೆ ;

(ಈ) ನೂರಾರು ವಸತಿ ನಿಲಯಗಳು ಬಾಡಿಗೆ ಮನೆಯಲ್ಲಿ ನಡೆಯುತ್ತಿರುವುದರಿಂದ ಅಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದು, ಈ ಕುರಿತು ಸರ್ಕಾರ ಯಾವ ಕ್ರಮಕೈಗೊಳ್ಳಲಾಗಿದೆ ;

ಉ) ಸರ್ಕಾರ ತಕ್ಷಣವೆ ತಾಲ್ಲೂಕು/ಜಿಲ್ಲಾ ಮಟ್ಟದಲ್ಲಿ ವಸತಿ ನಿಲಯಗಳನ್ನು ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಶಿಕ್ಷಣ ಮತ್ತು ವಸತಿ ನಿಲಯಗಳ ಗ್ಯಾರಂಟಿ ಕ್ರಮಕೈಗೊಳ್ಳುವುದೇ ?

## ಮಾದಾರ ಚನ್ನಯ್ಯನವರ ಪ್ರತಿಮೆ ಸ್ಥಾಪನೆ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೮ (೧೫೩೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾದಾರ ಚೆನ್ನಯ್ಯ ೧೨ನೇ ಶತಮಾನದ ಶಿವಶರಣರು ಹಾಗೂ ವಚನಕಾರರು, ಚಮ್ಮಾರ ಕೆಲಸ ಮಾಡುತ್ತಿದ್ದ ಇವರು ಶಿವಶರಣರಿಗೆ ಚಪ್ಪಲಿ ಮಾಡುವ ಕಾಯಕ ಮಾಡುತ್ತಿದ್ದ ಇತಿಹಾಸವಿರುವುದು ನಿಜವೇ ;

(ಆ) ಇವರು ಶಿವನ ಮಹಾನ್ ಭಕ್ತರಾಗಿದ್ದರು, ಈ ಮಹಾನ್ ಶರಣರ ಪ್ರತಿಮೆಯನ್ನು ಕಲಬುರಗಿಯಲ್ಲಿ ಬಾಬು ಜಗಜೀವನರಾಂರವರ ಪ್ರತಿಮೆಯ ಪಕ್ಕದಲ್ಲಿ ಸ್ಥಾಪಿಸಿ ಮುಂಬರುವ ಅವರ ಜಯಂತಿಗೆ ವಿಶೇಷ ಕೊಡುಗೆ ನೀಡಲು ಸರ್ಕಾರ ಮುಂದಾಗುವುದೇ ?

## ನರೇಗಾ ಯೋಜನೆಯಡಿ ಕರ್ನಾಟಕ ಕೂಲಿ ಕಾರ್ಮಿಕರ ಅನುದಾನ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೯ (೧೫೩೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ (ನರೇಗಾ) ಕರ್ನಾಟಕದಲ್ಲಿ ಕೂಲಿ ಕಾರ್ಮಿಕರಿಗೆ ಕೇಂದ್ರ ಸರ್ಕಾರ ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು ;

(ಆ) ಎಷ್ಟು ದಿನಗಳಿಂದ ಈ ಅನುದಾನ ಬಾಕಿ ಉಳಿದಿದೆ; ಸರ್ಕಾರ ಈ ಸಂಬಂಧ ಕೇಂದ್ರದೊಂದಿಗೆ ಪತ್ರ ವ್ಯವಹಾರ ನಡೆಸಿದೆಯೇ ;

(ಇ) ಅನುದಾನ ಬಿಡುಗಡೆಗೊಳಿಸುವಂತೆ ಕೇಂದ್ರದ ಮೇಲೆ ಒತ್ತಡ ತರಲಾಗುವುದೇ ?

## ಕಟ್ಟಡ ಕಾರ್ಮಿಕರಂತೆ ನೇಕಾರ ಕಾರ್ಮಿಕರಿಗೂ ಸೌಲಭ್ಯ ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೩೮೦ (೧೫೫೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಕಾರ್ಮಿಕರಂತೆ ನೇಕಾರ ಕಾರ್ಮಿಕರಿಗೂ ಸೌಲಭ್ಯ ನೀಡಬೇಕೆಂಬ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇವರ ಈ ಬೇಡಿಕೆ ಪೂರೈಸಲು ಸರ್ಕಾರ ಯಾವ ರೀತಿ ಕ್ರಮ ತೆಗೆದುಕೊಂಡಿದೆ ;

(ಇ) ಇವರ ಬೇಡಿಕೆ ಈಡೇರಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಅನಿಮೇಷನ್ ಚಿತ್ರಗಳಿಗೆ ಸಹಾಯಧನ ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೩೮೧ (೧೫೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಅನಿಮೇಷನ್ ಚಿತ್ರಗಳಿಗೆ ಸಹಾಯಧನ ನೀಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಆ) ಈ ಹಿಂದಿನ ನೀತಿಯಲ್ಲಿ ೫ ಕೋಟಿಯವರೆಗೂ ಸಹಾಯಧನ ನೀಡುವುದಾಗಿ ಹೇಳಿದ್ದು, ಇದರ ಸದುಪಯೋಗ ಪಡೆದ ಚಿತ್ರ ನಿರ್ಮಾಣ ಸಂಸ್ಥೆಗಳು ಯಾವುವು ;

(ಇ) ಈ ಸಂಸ್ಥೆಗಳು ತಯಾರಿಸಿರುವ ಚಿತ್ರಗಳು ಯಾವುವು ; ಇವು ಪ್ರದರ್ಶನಗೊಂಡಿವೆಯೇ ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಹಂಚಿಕೆಯಾದ ಅನುದಾನದ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೩೮೨ (೧೫೬೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಸುವ ಎಷ್ಟು ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿವೆ ;

(ಆ) ಈ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಎಷ್ಟು ಅನುದಾನ ಹಂಚಿಕೆಯಾಗಿದೆ ; ಹಂಚಿಕೆಯಾದ ಅನುದಾನದಲ್ಲಿ ಜಿಲ್ಲಾವಾರು ಪ್ರತಿ ಯೋಜನೆಗಳಿಗೆ ಸಂಬಂಧಪಟ್ಟಂತೆ ಅನುದಾನ ಬಳಕೆ ಆಗಿದೆಯೇ ; (ಮಾಹಿತಿ ನೀಡುವುದು)

(ಇ) ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯುಗಳಲ್ಲಿ ವಿದ್ಯಾರ್ಥಿಗಳಿಗೆ ಶೂ, ಸಾಕ್ಸ್ ಮತ್ತು ಸಮವಸ್ತ್ರ ಪೂರೈಸಲಾಗಿದೆಯೇ ; (ಪೂರೈಸಿದ್ದಲ್ಲಿ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿಯಲ್ಲಿ ಎಷ್ಟು ಫಲಾನುಭವಿಗಳಿದ್ದಾರೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಹಂಚಿಕೆಯಾದ ಅನುದಾನದ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೩೮೩ (೧೫೬೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸುವ ಎಷ್ಟು ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿವೆ ;

(ಆ) ರಾಜ್ಯದಲ್ಲಿನ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಎಷ್ಟು ಅನುದಾನ ಹಂಚಿಕೆಯಾಗಿದೆ; ಹಂಚಿಕೆಯಾದ ಅನುದಾನದಲ್ಲಿ ಜಿಲ್ಲಾವಾರು ಪ್ರತಿ ಯೋಜನೆಗಳಿಗೆ ಸಂಬಂಧಪಟ್ಟಂತೆ ಅನುದಾನದ ಬಳಕೆ ಆಗಿದೆಯೇ ; (ಮಾಹಿತಿ ನೀಡುವುದು)

(ಇ) ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಶೂ, ಸಾಕ್ಸ್ ಮತ್ತು ಸಮವಸ್ತ್ರ ಪೂರೈಸಲಾಗಿದೆಯೇ ; (ಪೂರೈಸಿದ್ದಲ್ಲಿ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿಯಲ್ಲಿ ಎಷ್ಟು ಫಲಾನುಭವಿಗಳಿದ್ದಾರೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕನ್ನಡ ಭವನ ನಿರ್ಮಾಣದ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೩೮೪ (೧೫೬೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಬಕವಿ–ಬನಹಟ್ಟಿ ವ್ಯಾಪ್ತಿಯಲ್ಲಿ "ಕನ್ನಡ ಭವನದ" ನಿರ್ಮಾಣ ಕಾಮಗಾರಿಗೆ ೬೦ ಲಕ್ಷ ರೂ.ಗಳ ಅನುದಾನ ಮಂಜೂರಾಗಿದ್ದರೂ

ಸಹ ೧೦ ವರ್ಷಗಳಿಂದ ಕಾಮಗಾರಿ ಪೂರ್ಣಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಸದರಿ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತ ನಂತರ ಕೇಂದ್ರ ಸರ್ಕಾರದ ಅನುದಾನದ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೫ (೧೫೭೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ ಸ್ಥಾಪನೆಯಾದಾಗಿನಿಂದ ಈವರೆಗೆ ಕೇಂದ್ರ ಸರ್ಕಾರದಿಂದ ದೊರೆತಿರುವ ಅನುದಾನ ಎಷ್ಟು; (ವರ್ಷವಾರು ವಿವರ ಒದಗಿಸುವುದು)

(ಆ) ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಸ್ವಂತ ಕಟ್ಟಡ, ಸಿಬ್ಬಂದಿ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಇ) ಈ ಅಧ್ಯಯನ ಕೇಂದ್ರವು ನಡೆಸುತ್ತಿರುವ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳಾವುವು ? (ವಿವರ ಒದಗಿಸುವುದು)

# ಹೊರಗುತ್ತಿಗೆ ನೌಕರರ ಕನಿಷ್ಠ ವೇತನ ಇಎಸ್ಐ ಮತ್ತು ಇಪಿಎಫ್ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೬ (೧೫೭೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಕೆಲವು ಇಲಾಖೆಗಳು ಕನಿಷ್ಟ ವೇತನ ಪಾವತಿಸದೇ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕನಿಷ್ಟ ವೇತನ ಪಾವತಿಸದ ಇಲಾಖೆಯ/ನಿಗಮ/ಮಂಡಳಿಯ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; ಕನಿಷ್ಟ ವೇತನ ಪಾವತಿಸದಿರುವ ಇಲಾಖೆಗಳು ಯಾವುವು ; (ವಿವರ ನೀಡುವುದು)

(ಆ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಏಜೆನ್ಸಿಗಳು ಸಕಾಲದಲ್ಲಿ ವೇತನ ಪಾವತಿಸದೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಏಜೆನ್ಸಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಹೊರಗುತ್ತಿಗೆ ನೌಕರರನ್ನು ಪೂರೈಸುವ ಏಜೆನ್ಸಿಗಳು ಹೊರಗುತ್ತಿಗೆ ನೌಕರರಿಗೆ ವಿಮೆ ಮತ್ತು ಉದ್ಯೋಗಿಗಳ ಭವಿಷ್ಯ ನಿಧಿಯನ್ನು (ಇಎಸ್ಐ ಮತ್ತು ಇಪಿಎಫ್) ಸರಿಯಾಗಿ ಪಾವತಿಸದೇ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಮೆ ಮತ್ತು ಉದ್ಯೋಗಿಗಳ ಭವಿಷ್ಯ ನಿಧಿಯನ್ನು ಕಟ್ಟುನಿಟ್ಟಾಗಿ ಪಾವತಿಸದ ಏಜೆನ್ಸಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; ಇದುವರೆಗೆ ಅಂತಹ ಎಷ್ಟು ಏಜೆನ್ಸಿಗಳನ್ನು ಕಪ್ಪು ಪಟ್ಟಿಗೆ ಸೇರಿಸಲಾಗಿದೆ ? (ವಿವರ ನೀಡುವುದು)

## “ಜಲ ಜೀವನ್ ಮಿಷನ್” ಯೋಜನೆ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು ) :–**

೧೩೮೭ (೧೫೭೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) “ಜಲ ಜೀವನ್ ಮಿಷನ್" ಯೋಜನೆ ಜಾರಿಯಾದಾಗಿನಿಂದ ಪ್ರಸ್ತುತದವರೆಗೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಘೋಷಿಸಿದ ಅನುದಾನವೆಷ್ಟು ಮತ್ತು ಬಿಡುಗಡೆಗೊಳಿಸಿದ ಅನುದಾನವೆಷ್ಟು; (ವರ್ಷಾವಾರು ವಿವರ ನೀಡುವುದು)

(ಆ) ರಾಜ್ಯದಾದ್ಯಂತ "ಜಲ ಜೀವನ್ ಮಿಷನ್" ಯೋಜನೆಯ ಸಾಕಷ್ಟು ಕಾಮಗಾರಿಗಳು ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳಲ್ಲಿ ಅನಧಿಕೃತ ಬಡಾವಣೆ ಆಸ್ತಿಗಳಿಗೆ ನಮೂನೆ ೧೧ಬಿ ವಿತರಿಸುವ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು ) :–**

೧೩೮೮ (೧೫೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಿರ್ಮಾಣಗೊಂಡಿರುವ ಅನಧಿಕೃತ ಬಡಾವಣೆಗಳಲ್ಲಿ ನಿರ್ಮಾಣಗೊಂಡಿರುವ ನಿವೇಶನ/ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಇ–ಸ್ವತ್ತು ೧೧ಬಿ ನಮೂನೆಯನ್ನು ಸಾರ್ವಜನಿಕರಿಗೆ ವಿತರಿಸಲು ಸರ್ಕಾರವು ಕ್ರಮ ಕೈಗೊಂಡಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿಯೂ ಸಹ ಸರ್ವೆ ನಂಬರ್‌ನಲ್ಲಿ ಅನಧಿಕೃತ ಬಡಾವಣೆಯಲ್ಲಿ ನಿರ್ಮಾಣಗೊಂಡಿರುವ ನಿವೇಶನ/ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಇ–ಸ್ವತ್ತು ನಮೂನೆ ೧೧ ಬಿ ನ್ನು ಸಾರ್ವಜನಿಕರಿಗೆ ವಿತರಿಸಲು ಸರ್ಕಾರವು ಉದ್ದೇಶಿಸಿದೆಯೇ ;

(ಇ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ? (ಮಾಹಿತಿ ನೀಡುವುದು)

## ಧನ ಸಹಾಯ ನೀಡುವ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೯ (೧೫೧೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ ೦೩ ವರ್ಷದಲ್ಲಿ ಕಾರ್ಮಿಕರಿಗೆ ಕೆಲಸದ ಸ್ಥಳದಲ್ಲಿ ಅಪಘಾತವಾದಾಗ ಸರ್ಕಾರವು ನೀಡಿರುವ ಧನ ಸಹಾಯವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ ೦೩ ವರ್ಷದಲ್ಲಿ ಎಷ್ಟು ಕಾರ್ಮಿಕರಿಗೆ ಧನ ಸಹಾಯ ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ನೀಡಿರುವ ಧನ ಸಹಾಯ ಹೆಚ್ಚಿಸುವ ಕುರಿತು ಸರ್ಕಾರದ ಗಮನದಲ್ಲಿದೆಯೇ ;

(ಈ) ಇದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಧನ ಸಹಾಯ ಹೆಚ್ಚಳ ಮಾಡಲಾಗುವುದು ? (ವಿವರ ನೀಡುವುದು)

## ವಿದ್ಯಾರ್ಥಿ ನಿಲಯಗಳ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೯೦ (೧೫೨೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಮೆಟ್ರಿಕ್ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು : (ತಾಲ್ಲೂಕುವಾರು ವಿವರ ನೀಡುವುದು)

(ಆ) ಖಾಸಗಿ ಮತ್ತು ಸರ್ಕಾರಿ ಕಟ್ಟಡದಲ್ಲಿ ನಡೆಯುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಖಾಸಗಿಯಾಗಿ ನಡೆಸುವ ಬದಲಾಗಿ ಸರ್ಕಾರವು ಜಾಗ ಖರೀದಿ ಮಾಡಿ ವಿದ್ಯಾರ್ಥಿ ನಿಲಯ ಕಟ್ಟಡ ಕಟ್ಟಿಸಿ ವಿದ್ಯಾರ್ಥಿ ನಿಲಯಗಳು ಪ್ರಾರಂಭ ಮಾಡಿದರೆ ಸರ್ಕಾರದ ಬೊಕ್ಕಸಕ್ಕೆ ಉಳಿತಾಯವಾಗುವುದಿಲ್ಲವೇ ?

## ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯೧ (೧೫೫೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹಲಕ್ಷ್ಮಿ ಯೋಜನೆಯಡಿ ರಾಜ್ಯ ಸರ್ಕಾರದಿಂದ ಪಡಿತರ ಚೀಟಿಯ ಮುಖ್ಯಸ್ಥರಿಗೆ ಪ್ರತಿ ತಂಗಳು ರೂ. ೨೦೦೦/– ಗಳ

ಆರ್ಥಿಕ ನೆರವು ನೀಡಲಾಗುತ್ತಿದ್ದು, ರಾಜ್ಯದಲ್ಲಿ ಈ ಆರ್ಥಿಕ ನೆರವು ಪಡೆಯುತ್ತಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು;

(ಆ) ಈ ಆರ್ಥಿಕ ನೆರವನ್ನು ಪಡೆಯುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಬೀದಿ ಬದಿ ವ್ಯಾಪಾರಿಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೨ (೧೪೦೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಬೀದಿ ಬದಿ ವ್ಯಾಪಾರಿಗಳ ಹಿತರಕ್ಷಣೆಗಾಗಿ ಸರ್ಕಾರವು ಯಾವುದಾದರೂ ವಿಶೇಷ ಕಲ್ಯಾಣ ಯೋಜನೆಯನ್ನು ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ಆ ಯೋಜನೆಗಳು ಯಾವುವು ; (ವಿವರಗಳನ್ನು ನೀಡುವುದು)

(ಆ) ಬೀದಿ ಬದಿ ವ್ಯಾಪಾರಸ್ಥರನ್ನು ಗುರುತಿಸಲು ಸರ್ಕಾರದ ವತಿಯಿಂದ ಸರ್ವೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಅನುಸರಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ಜನ ಬೀದಿ ಬದಿ ವ್ಯಾಪಾರ ಮಾಡಿ ಜೀವನ ಸಾಗಿಸುತ್ತಿದ್ದಾರೆ ? (ಇದರ ಬಗ್ಗೆ ಅಂಕಿ–ಅಂಶ ನೀಡುವುದು)

## ಸಹಾಯಕ ನಿರ್ದೇಶಕ ಹಾಗೂ ಕಾರ್ಯನಿರ್ವಹಕ ಅಧಿಕಾರಿ ಹುದ್ದೆಗೆ ನೀಡಿರುವ ಬಡ್ತಿಗಳ ಬಗ್ಗೆ

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೯೩ (೧೫೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೧ ರಿಂದ ೨೦೨೫ ರವರೆಗೆ ವರ್ಷವಾರು ಎಷ್ಟು ಜನ ಪಿ.ಡಿ.ಓ ಗಳಿಗೆ ಸಹಾಯಕ ನಿರ್ದೇಶಕರ ಹುದ್ದೆಗಳಿಗೆ ಬಡ್ತಿ ನೀಡಲಾಗಿದೆ ; ಇವುಗಳಲ್ಲಿ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ ಬಡ್ತಿ ಪಡೆದವರೆಷ್ಟು ಹಾಗೂ ಇಲಾಖಾ ಪರೀಕ್ಷೆಗಳಲ್ಲಿ ಪಾಸು ಮಾಡದೆ ಬಡ್ತಿ ಪಡೆದವರೆಷ್ಟು ; (ನೌಕರರ ಹೆಸರು ಹಾಗೂ ಇವರ ಇಲಾಖಾ ಪರೀಕ್ಷೆ ಪ್ರಮಾಣ ಪತ್ರಗಳ ಪ್ರತಿ ನೀಡುವುದು)

(ಆ) ೨೦೧೧ ರಿಂದ ೨೦೨೫ರ ಅವಧಿಯಲ್ಲಿ ಎಷ್ಟು ಸಹಾಯಕ ನಿರ್ದೇಶಕರಿಗೆ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಬಡ್ತಿ ನೀಡಲಾಗಿದೆ ; ಇವುಗಳಲ್ಲಿ ನಿಗಧಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ಪಾಸು ಮಾಡಿ ಬಡ್ತಿ ಪಡೆದವರೆಷ್ಟು ಹಾಗೂ ಇಲಾಖಾ ಪರೀಕ್ಷೆಗಳನ್ನು ಪಾಸು ಮಾಡದೆ ಬಡ್ತಿ ಪಡೆದವರೆಷ್ಟು ? (ನೌಕರರ ಹೆಸರು ಹಾಗೂ ಇವರ ಇಲಾಖಾ ಪರೀಕ್ಷೆ ಪ್ರಮಾಣ ಪತ್ರಗಳ ಪ್ರತಿ ನೀಡುವುದು)

## ಸಿವಿಲ್ ಕಾಮಗಾರಿಗಳ ಗುಣಮಟ್ಟಗಳ ಬಗ್ಗೆ

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೯೪ (೧೫೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯತಿಗಳಲ್ಲಿ ವಿವಿಧ ಯೋಜನೆಯಡಿ ಕೈಗೊಳ್ಳುವ ಸಿವಿಲ್ ಕಾಮಗಾರಿಗಳ ಸಾಮಗ್ರಿಗಳ ಪ್ರಮಾಣ ಮತ್ತು ಇದರ ಗುಣಮಟ್ಟ ನೋಡಿಕೊಳ್ಳಬೇಕಾದ ಜವಾಬ್ದಾರಿಯುತ ಅಧಿಕಾರಿ ಯಾರು ; (ಇದಕ್ಕೆ ಪೂರಕ ಸರ್ಕಾರದ ಆದೇಶ, ಸುತ್ತೋಲೆಯ ಪ್ರತಿ ನೀಡುವುದು)

(ಆ) ಸದರಿ ಸಿವಿಲ್ ಕಾಮಗಾರಿಗಳ ಬಗ್ಗೆ ಸಂಬಂಧಿಸಿದ ಅಭಿಯಂತರರಿಂದ ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರ ಪಡೆದು ಹಣ ಬಟವಾಡೆ ಮಾಡಿದ ನಂತರ, ಇವುಗಳ ಗುಣಮಟ್ಟ ಕಳಪೆಯಾದ ಬಗ್ಗೆ ವರದಿಯಾದರೆ ಇದಕ್ಕೆ ಹೊಣೆಗಾರರು ಯಾರು ; (ಇದಕ್ಕೆ ಪೂರಕ ಸರ್ಕಾರದ ಆದೇಶ, ಸುತ್ತೋಲೆಯ ಪ್ರತಿ ನೀಡುವುದು)

(ಇ) ಈ ಕಾಮಗಾರಿಗಳ ಗುಣಮಟ್ಟ ಪರೀಕ್ಷೆಯ IS 13311 (Part-2) 1992 Indian Standard non destructive testing of concrete-methods of test ಸೂಚಿಸಿದ ಸ್ಥಾಪಿತವಾದ ವಿಧಾನವನ್ನು ಪಾಲಿಸದೆ ಗುಣಮಟ್ಟ ಪರೀಕ್ಷೆ ನಡೆಸಿರುವ ವರದಿಗಳನ್ನು ಪರಿಗಣಿಸಬಹುದೇ ? (ಇದಕ್ಕೆ ಪೂರಕ ಸರ್ಕಾರದ ಆದೇಶ, ಸುತ್ತೋಲೆಯ ಪ್ರತಿ ಸಹ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O277/500 ಪ್ರತಿಗಳು/15–03–2025